# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 209 | Volume - 01 Issue - 209
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 06–03–2024 ಬುಧವಾರ | Date: 06-03-2024 Wednesday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



ಒಳಪುಟದ ಸುದ್ದಿಗಳು

ಮಹಾಶಿವರಾತ್ರಿ ಪ್ರಯುಕ್ತ 40 ಅಡಿ ಎತ್ತರದ ಶಿವಲಿಂಗ ದರ್ಶನ ಕಾರ್ಯಕ್ರಮ: ವಿಮಲಕ್ಕ 2

ಟ್ಯಾಂಕರ್ ನೀರಿನ ಗುಣಮಟ್ಟ ಪರೀಕ್ಷಿಸಿಯೇ ಜನರಿಗೆ ಪೂರೈಸಿ: ಡಿಸಿ 3

ಜಿಲ್ಲೆಯ ಪಂಚಮಿತ್ರ ಪೋರ್ಟಲ್ ಲೋಕಾರ್ಪಣೆ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ವಿರೋಧ ಪಕ್ಷದ ಟೀಕೆ ಟಿಪ್ಪಣಿಗಳಿಗೆ ಉತ್ತರವಾಗಿ ಗ್ಯಾರೆಂಟಿ ಯೋಜನೆ ಜಾರಿ

# ಸರ್ಕಾರ ಐದು ಗ್ಯಾರೆಂಟಿ ಯೋಜನೆ ಜಾರಿ ಮಾಡಿ ನುಡಿದಂತೆ ನಡೆದಿದ್ದೇವೆ: ಶಾಸಕ ಟಿ.ರಘುಮೂರ್ತಿ





» ನಮ್ಮ ಜನ ಸಮಾಚಾರ

ಚಿತ್ರದುರ್ಗ: ಕಾಂಗ್ರೆಸ್ ಪಕ್ಷ ಚುನಾವಣೆ ಸಂದರ್ಭದಲ್ಲಿ ಜನರಿಗೆ ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹಜ್ಯೋತಿ, ಶಕ್ತಿ ಹಾಗೂ ಯುವನಿಧಿ ಯೋಜನಗಳನ್ನು ಜಾರಿ ಮಾಡುವ ಭರವಸೆಯನ್ನು ಪ್ರಣಾಳಿಕೆಯಲ್ಲಿ ನೀಡಲಾಗಿತ್ತು. ವಿರೋಧ ಪಕ್ಷಗಳು ಈ ಗ್ಯಾರೆಂಟಿ ಯೋಜನೆಗಳನ್ನು ಜಾರಿ ಮಾಡುವುದು ಸಾಧ್ಯವಿಲ್ಲ. ಒಂದು ವೇಳೆ ಜಾರಿ ಮಾಡಿದರೆ ರಾಜ್ಯ ದಿವಾಳಿಯಾಗುತ್ತದೆ ಎಂದು ಟೀಕೆ ಟಿಪ್ಪಣಿ ಮಾಡುವುದರೊಂದಿಗೆ, ನಗುತ್ತ ಮಾತುಗಳನ್ನು ಆಡಿದ್ದರು. ನಮ್ಮ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದಲ್ಲಿ ಅಧಿಕಾರಿ ಬಂದ ಕಾಂಗ್ರೆಸ್ ಸರ್ಕಾರ, ಕೊಟ್ಟ ಮಾತಿನಂತೆ ಯೋಜನೆಗಳನ್ನು ಯಶಸ್ವಿಯಾಗಿ ಜಾರಿ ಮಾಡಿ, ಟೀಕೆ ಟಿಪ್ಪಣಿ ಹಾಗೂ ಕುಹಕಗಳಿಗೆ ತಕ್ಕ ಉತ್ತರ ನೀಡಿದೆ ಎಂದು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಹೇಳಿದರು.

ತುರುವನೂರು ಗ್ರಾಮದ ಪ್ರೌಢಶಾಲಾ ಆವರಣದಲ್ಲಿ, ಮಂಗಳವಾರ ಆಯೋಜಿಸಲಾದ ಹೋಬಳಿ ಮಟ್ಟದ ಪಂಚ ಗ್ಯಾರೆಂಟಿ ಯೋಜನಗೆಳ ಜಾಗೃತಿ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಗ್ಯಾರೆಂಟಿ ಯೋಜನೆಗಳ ಜಾರಿಯಿಂದ ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿಲ್ಲ.ಮತ್ತಷ್ಟುಬಲಿಷ್ಠಾವಾಗಿದೆ. ಈ ಬಾರಿ ಬಜೆಟ್‌ನಲ್ಲಿ ಸುಮಾರು ರೂ.50 ಸಾವಿರ ಕೋಟಿಗೂ ಅಧಿಕ ಹಣವನ್ನು ಯೋಜನೆಗಳಿಗಾಗಿ ಮೀಸಲು ಇರಿಸಲಾಗಿದೆ. ಜೂನ್ 21 ರಂದು ಶಕ್ತಿ ಯೋಜನೆಗೆ ಚಾಲನೆ ನೀಡಲಾಯಿತು. ಇದರಿಂದ ರಾಜ್ಯದ ಎಲ್ಲಾ ವರ್ಗದ ಮಹಿಳೆಯರು ಉಚಿತವಾಗಿ ರಾಜ್ಯಾದ್ಯಂತ ಪ್ರಯಾಣ ಮಾಡುವ ಅವಕಾಶ ಲಭಿಸಿದೆ. ದೇಶದಲ್ಲೇ ಪ್ರಥಮ ಬಾರಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಅನ್ನಭಾಗ್ಯ ಯೋಜನೆ ಜಾರಿ ಮಾಡಿ, ಬಿಪಿಎಲ್ ಕುಟುಂಬದ ಪ್ರತಿ ವ್ಯಕ್ತಿಗೂ 5 ಕೆ.ಜಿ. ಉಚಿತ ಅಕ್ಕಿಯನ್ನು ನೀಡಿದರು. ಹಿಂದಿನ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿಯೇ 5 ಕೆ.ಜಿ. ಅಕ್ಕಿ ಪ್ರಮಾಣವನ್ನು 7 ಕೆ.ಜಿ.ಗೆ ಏರಿಸಲಾಗಿತ್ತು. ಆದರೆ ನಂತರ ಬಂದ ಸರ್ಕಾರ ಅನ್ನಭಾಗ್ಯ ಯೋಜನೆಯನ್ನು ನಿಲ್ಲಿಸುವ ಚಿಂತನೆ ನಡೆಸಿತ್ತು. ದೇಶ ಕೋವಿಡ್ ಮಹಾಮಾರಿಗೆ ಸಿಲುಕಿದ್ದರಿಂದ ಯೋಜನೆಯನ್ನು ಮುಂದುವರಿಸಲಾಯಿತು. ಬಡವರಿಗೆ ಅನ್ನಭಾಗ್ಯ ಕೋವಿಡ್ ಲಾಕ್‌ಡೌನ್ ಸಂದರ್ಭದಲ್ಲಿ ಸಂಜೀವಿನಿ ಆಯಿತು. ರಾಜ್ಯ ಸರ್ಕಾರ ಅನ್ನಭಾಗ್ಯ ಯೋಜನೆಗೆ ಅಕ್ಕಿ ನೀಡಲು ಕೇಂದ್ರ ಸರ್ಕಾರಕ್ಕೆ ಕೋರಿದಾಗ, ಮನವಿಯನ್ನು ತಿರಸ್ಕರಿಸಲಾಯಿತು. ಕೇಂದ್ರ ಸರ್ಕಾರದ ಈ ನಿಲುವನ್ನೇ ನೆಪ ಮಾಡಿ ಯೋಜನೆಯ ಜಾರಿಯನ್ನು ವಿಳಂಬ ಮಾಡಬಹುದಿತ್ತು. ಆದರೆ ಮುಖ್ಯಮಂತ್ರಿಗಳು ಜನರಿಗೆ ಕೊಟ್ಟ ಮಾತಿನಂತೆ 5 ಕೆ.ಜಿ. ಅಕ್ಕಿ ನೀಡಲು ಬದ್ಧರಾಗಿದ್ದರು. ಕೇಂದ್ರ ಸರ್ಕಾರವನ್ನು ಟೀಕಿಸುತ್ತಾ ಕೂರುವ ಬದಲು ಆಹಾರ ಧಾನ್ಯಕ್ಕೆ ಪ್ರತಿಯಾಗಿ ಪ್ರತಿ ತಿಂಗಳು ರೂ.170 ಮೊತ್ತವನ್ನು ಡಿಬಿಟಿ ಮೂಲಕ ಫಲಾನುಭವಿಗಳ ಖಾತೆಗೆ ಜಮೆ ಮಾಡುವ ನಿರ್ಧಾರ ಕೈಗೊಂಡರು ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಚುನಾವಣೆ ಸಂದರ್ಭದಲ್ಲಿ ನೀಡುತ್ತಿದ್ದ ಆಶ್ವಾಸನೆಗಳನ್ನು ಈಡೇರಿಸುವ ಬದ್ಧತೆಗೆ ಹೊಸ ರೂಪವಾಗಿ ಗ್ಯಾರೆಂಟಿ ಎಂಬ ಮಾತು ಪ್ರಚಲಿತವಾಗಿದೆ. ಮಾರುಕಟ್ಟೆಯಲ್ಲಿ ಖರಿದಿಸುವ ವಸ್ತುಗಳಿಗೆ ತಯಾರಕರು ಗ್ಯಾರಂಟಿ ಅವಧಿಯ ಕಾರ್ಡುಗಳನ್ನು ನೀಡುತ್ತಾರೆ. ಅದೇ ರೀತಿ ಸರ್ಕಾರವು ಪ್ರನಾಳಿಕೆಯಲ್ಲಿ ನೀಡಿದ ಆಶ್ವಾಸನೆಗಳನ್ನು ಈಡೇರಿಸುವ ಬದ್ಧತೆ ತೋರಬೇಕು. ತುರುವನೂರು ಹೋಬಳಿಯಲ್ಲಿ ಶೇ.95 ರಷ್ಟು ಎಲ್ಲಾ ಗ್ಯಾರೆಂಟಿ ಯೋಜನೆಗಳನ್ನು ಫಲಾನುಭವಿಗಳಿಗೆ ನೀಡಲಾಗಿದೆ. ದಾಖಲೆಗಳ ಕೊರತೆ ಹಾಗೂ ತಾಂತ್ರಿಕ ಕಾರಣಗಳಿಂದ ಹಲವು ಜನರ ಅರ್ಜಿಗಳಲ್ಲಿ ತೊಂದರೆ ಉಂಟಾಗಿದೆ. ಇದನ್ನು ಸಹ ಸರಿ ಪಡಿಸಿ ನೂರಕ್ಕೆ ನೂರರಷ್ಟು ಗ್ಯಾರೆಂಟಿ ಯೋಜನೆಗಳನ್ನು ಜಾರಿ ಮಾಡುವುದಾಗಿ ಶಾಸಕ ಟಿ.ರಘುಮೂರ್ತಿ ಹೇಳಿದರು.

ಫಲಾನುಭವಿಗಳಾದ ಬೆಳಗಟ್ಟ ಗ್ರಾಮದ ಹೇಮಲತಾ, ತುರುವನೂರು ಗ್ರಾಮದ ಲಲಿತಮ್ಮ ಗ್ಯಾರೆಂಟಿ ಯೋಜನೆಗಳ ಕುರಿತು ತಮ್ಮ ಅನಿಸಿಕೆ ಹಂಚಿಕೊಂಡರು.

ಇದೇ ಸಂದರ್ಭದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾತು. ಮಹಿಳಾ ದಿನಾಚರಣೆ ಅಂಗವಾಗಿ ಗ್ರಾಮದ ಪ್ರೌಢಶಾಲಾ ವಿಧ್ಯಾರ್ಥಿನಿಯರಿಗೆ ಏರ್ಪಡಿಸಲಾದ ಪ್ರಬಂದ,ಚಿತ್ರಕಲೆ,ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ವೇದಿಕೆಯಲ್ಲಿ ಸನ್ಮಾನಿಸಿ ಪ್ರಮಾಣ ಪತ್ರ ವಿತರಿಸಲಾಯಿತು. ವಕೀಲರಾದ ದಿಲ್‌ಶಾದ್ ಮಹಿಳಾ ಕಾನೂನು ಹಾಗೂ ಮಹಿಳೆಯರ ಸುರಕ್ಷತೆ ಕುರಿತು ಉಪನ್ಯಾಸ ನೀಡಿದರು.

ಜಿ.ಪಂ. ಮಾಜಿ ಸದಸ್ಯ ಬಾಬುರೆಡ್ಡಿ, ತಾ.ಪಂ.ಇ.ಓ.ಅನಂತರಾಜು, ತುರುವನೂರು ಗ್ರಾ.ಪಂ.ಅಧ್ಯಕ್ಷೆ ದೀಪಾ.ಪಿ ಮಹೇಶ್, ಬೆಳಗಟ್ಟ ಗ್ರಾ.ಪಂ.ಅಧ್ಯಕ್ಷೆ ಮಂಜುಶ್ರೀ ಪಾಲಯ್ಯ,ಕೂನಬೇವು ಗ್ರಾ.ಪಂ.ಅಧ್ಯಕ್ಷ ಜಿ.ಪಿ.ಅನಿಲ್ ಕುಮಾರ್, ಮಾದನಾಯಕನಹಳ್ಳಿ ಗ್ರಾ.ಪಂ.ಅಧ್ಯಕ್ಷೆ ಕವಿತಾ ನಾಗರಾಜ್, ಮುದ್ದಾಪುರ ಗ್ರಾ.ಪಂ. ಅಧ್ಯಕ್ಷೆ ಮಂಗಳಾ,ಚಿಕ್ಕಗೊಂಡನಹಳ್ಳಿ ಗ್ರಾ.ಪಂ.ಅಧ್ಯಕ್ಷೆ ಮಹಾಂತಮ್ಮ, ಸಿಡಿಪಿಓ ಸುಧಾ, ವೈದ್ಯಾಧಿಕಾರಿ ಸುಶ್ಮಿತಾ ಉಪಸ್ಥಿತರಿದ್ದರು. ಕೂನಬೇವು ಪಿಡಿಓ ಧನಂಜಯ ಸ್ವಾಗತಿಸಿದರು. ತುರುವನೂರು ಪಿಡಿಓ ಖಲೀಂ ಕಾರ್ಯಕ್ರಮ ನಿರೂಪಿಸಿದರು.



> ಕಾಂಗ್ರೆಸ್ ಸರ್ಕಾರ ಐದು ಗ್ಯಾರೆಂಟಿ ಯೋಜನೆಗಳನ್ನು ಜಾರಿ ಮಾಡುವ ಮೂಲಕ ಬಡವರ ಪರ ಸರ್ಕಾರ ಇದೆ ಎಂದು ನಿರೂಪಿಸಿದೆ. ವಿರೋಧ ಪಕ್ಷಗಳು ರಾಜ್ಯ ದಿವಾಳಿ ಆಗುತ್ತದೆ ಎಂದು ನಗುತ್ತಿದ್ದರು ಇಂದು ಗ್ಯಾರೆಂಟಿ ಜಾರಿಗೊಸಿದ್ದರಿಂದ ಅವರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ.
>
> » **ಟಿ.ರಘುಮೂರ್ತಿ ಶಾಸಕರು ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು**

> ತುರುವನೂರು ಹೊಬಳಿಯಲ್ಲಿ ಅನ್ನ ಭಾಗ್ಯ ಯೋಜನೆಯಡಿ 11,812 ಫಲಾನುಭವಿಗಳ ಪೈಕಿ 11,679 ಜನರಿಗೆ, ಗೃಹಲಕ್ಷ್ಮೀ ಯೋಜನೆಯಡಿ 9832 ಫಲಾನುಭವಿಗಳ ಪೈಕಿ 9,784, ಗೃಹಜ್ಯೋತಿ ಯೋಜನೆಯಡಿ 9247 ಫಲಾನುಭವಿಗಳ ಪೈಕಿ 8641 ಫಲಾನುಭವಿಗಳು ಲಾಭ ಪಡೆಯುತ್ತಿದ್ದಾರೆ. ಯುವನಿಧಿ ಯೋಜನೆಯಡಿ ನಿರುದ್ಯೋಗ ಭತ್ಯೆಗಾಗಿ ಹೋಬಳಿಯಲ್ಲಿ 3939 ಯುವಕರು ಅರ್ಜಿ ಸಲ್ಲಿಸಿದ್ದಾರೆ. ಶಕ್ತಿ ಯೋಜನೆಯ ಹೋಬಳಿಯಲ್ಲಿ ಯಶಸ್ವಿಯಾಗಿದೆ. ಸರ್ಕಾರದ ಗ್ಯಾರೆಂಟಿ ಯೋಜನೆಗಳು ಮಹಿಳೆಯರ ಅಭ್ಯುದಯಕ್ಕೆ ಪೂರಕವಾಗಿದೆ.
>
> » **ಡಾ.ನಾಗವೇಣಿ ತಹಶೀಲ್ದಾರ್ ಚಿತ್ರದುರ್ಗ**

## ಫಾಸ್ಟ್ ನ್ಯೂಸ್

### 6 ರಂದು ತಾಯಿ ಮತ್ತು ಮಕ್ಕಳ ಆಸ್ಪತ್ರೆ ನೂತನ ಕಟ್ಟಡ ಉದ್ಘಾಟನೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಸ್ಪತ್ರೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ ಅಡಿಯಲ್ಲಿ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ನಿರ್ಮಿಸಿರುವ 100 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಕಟ್ಟಡದ ಉದ್ಘಾಟನಾ ಸಮಾರಂಭ ಇದೇ ಮಾರ್ಚ್ 06 ರಂದು ಬೆಳಿಗ್ಗೆ 10.30 ಕ್ಕೆ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರು ಹಾಗೂ ಚಿತ್ರದುರ್ಗ ಸಂಸದ ಎ.ನಾರಾಯಣಸ್ವಾಮಿ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಭಾಗವಹಿಸುವರು. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ವಿಶೇಷ ಆಹ್ವಾನಿತರಾಗಿ ಕರ್ನಾಟಕ ಸಣ್ಣ ಕೈಗಾರಿಕಾ ಮಂಡಳಿ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಆಹಾರ ಮತ್ತು ನಾಗರಿಕ ಸಬರಾಜು ನಿಗಮ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಬಾಷಾ, ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್ ಭಾಗವಹಿಸುವರು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ಎಲೆಕ್ಟ್ರಾನಿಕ್ ಮತ್ತು ಡಿಜಿಟಲ್ ಮಾಧ್ಯಮ ಉದ್ಯಮ ಸ್ಥಾಪನೆಗೆ ಅರ್ಜಿ




» ಚಿತ್ರದುರ್ಗ

ಕರ್ನಾಟಕ ಮಹರ್ಷಿ ವಾಲ್ಮೀಕಿ ಪಂಗಡಗಳ ಅಭಿವೃದ್ಧಿ ನಿಗಮವು 2023–24ನೇ ಸಾಲಿನ ಪರಿಶಿಷ್ಟ ಪಂಗಡದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಕ್ರಿಯಾ ಯೋಜನೆಯಡಿ ಪತ್ರಕರ್ತರಿಗೆ ಎಲೆಕ್ಟ್ರಾನಿಕ್ ಮತ್ತು ಡಿಜಿಟಲ್ ಮಾಧ್ಯಮ ಉದ್ಯಮ ಸ್ಥಾಪನೆಗೆ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಿದೆ. ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದ ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ–ಯುವತಿಯರಿಗೆ ಎಲೆಕ್ಟ್ರಾನಿಕ್ ಹಾಗೂ ಡಿಜಿಟಲ್ (ಯೂಟ್ಯೂಬ್ ಚಾನೆಲ್, ಸೋಷಿಯಲ್ ಮೀಡಿಯಾ ನ್ಯೂಸ್ ಪೇಜಸ್, ನ್ಯೂಸ್ ಆನ್ಲೈನ್ ಬ್ಲಾಗ್, ನ್ಯೂಸ್ ಕಂಟೆಂಟ್, ವೆಬ್ ಪೇಜಸ್, ಆನ್ಲೈನ್ ಜರ್ನಲಿಸಂ, ಮಾಧ್ಯಮ ಸಂಬಂಧಿತದ ತರಬೇತಿ) ಉದ್ಯಮ ಸ್ಥಾಪನೆಗೆ ಸಹಾಯಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲಾ, ತಾಲ್ಲೂಕು ಮಟ್ಟದಲ್ಲಿ ಉದ್ದಿಮೆಯನ್ನು ಸ್ಥಾಪಿಸಲು ಘಟಕದ ವೆಚ್ಚ ಶೇ.70 ರಷ್ಟು ಅಥವಾ ರೂ. 5 ಲಕ್ಷ ಸಹಾಯಧನವನ್ನು ಪಡೆಯಲು ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಉಳಿದ ಘಟಕದ ವೆಚ್ಚ ಬ್ಯಾಂಕ್‌ನಿಂದ ಪಡೆಯಬೇಕು ಎಂದು ಕರ್ನಾಟಕ ಮಹರ್ಷಿ ವಾಲ್ಮೀಕಿ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಪ್ರಮುಖ ಸುದ್ದಿ

# ಉಪವಾಸ ಸತ್ಯಾಗ್ರಹ ಹಿಂಪಡೆದ ಮಾಜಿ ಸಚಿವ

» ಹೊಸದುರ್ಗ

ತಾಲೂಕಿನ ಗುಡ್ಡಗಾಡುಗಳಲ್ಲಿ ಬಿದ್ದಿರುವ ಕಲ್ಲುಗಳು ಮತ್ತು ಬೆಂಕಿಯಿಂದ ಸುಟ್ಟ ಸೈಜುಗಲ್ಲು ಹಾಗೂ ಕಲ್ಲು ಹೊಡೆಯುವ ವೃತ್ತಿ ಮಾಡುತ್ತಿರುವ ಪರಿಶಿಷ್ಟ ಜಾತಿಯ ಕೂಲಿ ಕಾರ್ಮಿಕರ ಮೇಲೆ ದೌರ್ಜನ್ಯ ಎಸಗುವುದು ಮತ್ತು ಕಲ್ಲು ಹೊಡೆಯುವ ಸಾಂಪ್ರದಾಯಿಕ ವೃತ್ತಿಗೆ ಅಡ್ಡಿಪಡಿಸಿದರೆ, ಸುಮ್ಮನಿರಲಾರೆ. ಮಾನವೀಯತೆ ದೃಷ್ಟಿಯಿಂದ ಈ ಬಾರಿ ಮನವಿಗೆ ಸ್ಪಂದಿಸಿ, ತಪ್ಪಿತಸ್ಥ ಅಧಿಕಾರಿಗೆ ತಪ್ಪಿನ ಅರಿವಾಗಲಿ ಎಂಬ ಕಾರಣದಿಂದಾಗಿ ಉಪವಾಸ ಸತ್ಯಾಗ್ರಹ ಅಂತ್ಯಗೊಳಿಸುತ್ತಿದ್ದೇನೆ. ಇನ್ನೊಮ್ಮೆ ಇಂತಹ ಘಟನೆಗಳು ನಡದರೆ, ವಿಧಾನಸೌಧದ ಮುಂಭಾಗ ಧರಣಿ ಸತ್ಯಾಗ್ರಹ ಮಾಡುವೆ ಎಂದು ಮಾಜಿ ಸಚಿವ ಗೂಳಿಹಟ್ಟಿ ಶೇಖರ್ ಹೇಳಿದರು.

ಪರಿಶಿಷ್ಟ ಜಾತಿಯ ಕೂಲಿ ಕಾರ್ಮಿಕರ ಕಲ್ಲು ಒಡೆಯುವ ಸಾಂಪ್ರದಾಯಿಕ ವೃತ್ತಿ ಅಡ್ಡಿಪಡಿಸಲಾಗುತ್ತಿದೆ. ತಾಲೂಕಿನ ಡೀಮ್ಡ್ ಅರಣ್ಯ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆಗೆ ಬೆಂಬಲ ನೀಡಿರುವ ಹಿಂದಿನ ಜಿಲ್ಲಾಧಿಕಾರಿ ಹಾಗೂ ಇನ್ನಿತರ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ಒತ್ತಾಯಿಸಿ, ಪಟ್ಟಣದ ಅರಣ್ಯ ಇಲಾಖೆ ಮುಂಭಾಗ ಸೋಮವಾರ ಬೆಳಗ್ಗೆಯಿಂದ ಆಮರಣ ಉಪವಾಸ ಸತ್ಯಾಗ್ರಹ ಹಮ್ಮಿಕೊಂಡಿದ್ದರು. ಮಂಗಳವಾರ ಅಧಿಕಾರಿಗಳ ಮನವೊಲೈಕೆಯ ಬಳಿಕ ಉಪವಾಸ ಸತ್ಯಾಗ್ರಹ ಅಂತ್ಯಗೊಳಿಸಿ ಅವರು ಮಾತನಾಡಿದರು.



ಹಲವಾರು ವರ್ಷಗಳಿಂದ ಪರಿಶಿಷ್ಟ ಜಾತಿಯ ಜನರು ಬೆಟ್ಟ–ಗುಡ್ಡಗಳಲ್ಲಿನ ಕಲ್ಲುಗಳನ್ನು ಹೊಡೆದು ಸಾಂಪ್ರದಾಯಿಕ ವೃತ್ತಿಯನ್ನು ಮಾಡಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಇವರಿಗೆ ಯಾವುದೇ ಕಾರಣಕ್ಕೂ ತೊಂದರೆ ಆಗಬಾರದು. ನಿತ್ಯವೂ ದುಡಿದು ತಿನ್ನುವ ಬಡ ಕಾರ್ಮಿಕರ ಮೇಲೆಕೆ ನಿಮ್ಮ ದರ್ಪ? ಇನ್ನೊಮ್ಮೆ ತೊಂದರೆ ನೀಡಿದರೆ, ಬೆಂಗಳೂರಿನ ವಿಧಾನಸೌಧದ ಎದುರು ಒಬ್ಬಂಟಿಯಾಗಿ ಧರಣಿ ಸತ್ಯಾಗ್ರಹ ಕುಳಿತುಕೊಳ್ಳುವೆ. ಡೀಮ್ಡ್ ಅರಣ್ಯ ಪ್ರದೇಶದ ಬಗ್ಗೆ ಸಂಪೂರ್ಣವಾಗಿ ಸ್ಟಡಿ ಮಾಡಿ, ಮಾಹಿತಿ ನೀಡಿ. ಅಧಿಕಾರಿಗಳಿಗೆ ಸ್ವಂತ ತಾಲೂಕುಗಳು ಸಿಗುವುದೇ ಕಡಿಮೆ. ಇಂಥದರಲ್ಲಿ ಸಿಕ್ಕಿರುವ ಅವಕಾಶವೆಂದು ಜನರಿಗೆ ಒಳ್ಳೆಯ ಸೇವೆಯನ್ನು ಮಾಡಿ. ನೀವು ಸೇವೆ ಸಲ್ಲಿಸಿ ಬಿಟ್ಟು ಹೋದರೆ, ಜನರು ಮತ್ತೆ ನೆನೆಸಿಕೊಳ್ಳುವಂತಿರಬೇಕು. ಅಂತಹ ಪಾರದರ್ಶಕ ಮತ್ತು ವಿಶ್ವಾಸಾರ್ಹ ಕೆಲಸ ಮಾಡಿ ಎಂದು ವಲಯ ಅರಣ್ಯಾಧಿಕಾರಿಗೆ ಸಲಹೆ ನೀಡಿದರು.

ಮಧುರೆ ಸಮೀಪದ ಜಮೀನಿನಲ್ಲಿ ಅಡಿಕೆ ಗಿಡಗಳನ್ನು ಕಡಿದಿರುವ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು. ಇದೊಂದು ಪಿಟ್ಟಿ ಕೇಸ್ ಆಗಿದ್ದು, ಹೀಗೆ ಬಿಟ್ಟರೆ, ಗ್ರಾಮೀಣ ಭಾಗದಲ್ಲಿ ದ್ವೇಷಗಳು ಬೆಳೆಯುತ್ತವೆ. ಜನರಿಗೆ ಭಯವೇ ಇಲ್ಲದಂತೆ ಆಗುತ್ತದೆ. ಆದ್ದರಿಂದ ತಪ್ಪಿತಸ್ಥರಿಗೆ ತಕ್ಕ ಶಿಕ್ಷೆ ನೀಡಬೇಕು. ಆಡಳಿತದಲ್ಲಿ ಹಸ್ತಕ್ಷೇಪ ಮಾಡಬಾರದು. ಒಳ್ಳೆಯ ಕೆಲಸ ಮಾಡಲಿ ಎಂದು ಸುಮ್ಮನಿದ್ದೆ. ಅಮಾಯಕರಿಗೆ ತೊಂದರೆ ನೀಡಿ ದ್ವೇಷದ ರಾಜಕಾರಣ ಮಾಡಿದರೆ, ನಾನು ಸಹಿಸಲಾರೆ. ಯಾವ ಇಲಾಖೆಯಲ್ಲಿ ಜನರಿಗೆ ತೊಂದರೆಯಾಗುತ್ತಿದೆಯೋ, ಅಂತಹ ಇಲಾಖೆಯ ಮುಂದೆ ಒಬ್ಬಂಟಿಯಾಗಿ ಉಪವಾಸ ಸತ್ಯಾಗ್ರಹ ನಡೆಸುವೆ ಎಂದು ಎಚ್ಚರಿಸಿದರು.

### ಲೋಕಸಭಾ ಚುನಾವಣೆಗೆ ಸ್ಪರ್ಧಿಸುವುದಿಲ್ಲ

> 2024 ರ ಲೋಕಸಭಾ ಚುನಾವಣೆಯಲ್ಲಿ ನಾನು ಸ್ಪರ್ಧಿಸುವುದಿಲ್ಲ. ಮುಂಬರುವ ವಿಧಾನಸಭಾ ಕ್ಷೇತ್ರದ ಚುನಾವಣೆಯಲ್ಲಿ ಸ್ಪರ್ಧೆ ಮಾಡುವೆ. ರಾಜಕಾರಣ ಮಾಡಲೆಂದು ನಾನು ಇದೀಗ, ಇಲ್ಲಿಗೆ ಬಂದಿಲ್ಲ. ಸಾಮಾನ್ಯ ಜನರಿಗೆ ತೊಂದರೆಯಾಗುತ್ತಿರುವುದರಿಂದ ನ್ಯಾಯ ಸಿಗಲಿ ಎಂಬ ಸದುದ್ದೇಶದಿಂದ ಉಪವಾಸ ಸತ್ಯಾಗ್ರಹ ನಡೆಸಿರುವೆ. ವಿಧಾನಸಭಾ ಕ್ಷೇತ್ರದ ಚುನಾವಣೆ ಇನ್ನೂ 4 ವರ್ಷವಿದ್ದು, ಚುನಾವಣೆ ಬಂದಾಗ ರಾಜಕಾರಣ ಮಾಡುವೆ. ಕ್ಷೇತ್ರದಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಬೇಕೆಂಬ ಬಯಕೆಯಿದ್ದು, ಮುಂಬರುವ ವಿಧಾನಸಭಾ ಕ್ಷೇತ್ರದ ಚುನಾವಣೆಯಲ್ಲಿ ಜನರು ನನಗೆ ಆಶೀರ್ವಾದ ಮಾಡುವ ವಿಶ್ವಾಸವಿದ್ದು, ನನ್ನ ಕನಸ್ಸಿನಂತೆ ಹೊಸದುರ್ಗವನ್ನು ಅಭಿವೃದ್ಧಿಪಡಿಸುವೆ.
>
> » **ಗೂಳಿಹಟ್ಟಿ ಶೇಖರ್ ಮಾಜಿ ಶಾಸಕರು, ಹೊಸದುರ್ಗ ವಿಧಾನಸಭಾ ಕ್ಷೇತ್ರ.**

## ಫಾಸ್ಟ್ ನ್ಯೂಸ್

### 6ರಂದು ಪ್ರಾಥಮಿಕ ಶಾಲಾ ಶಿಕ್ಷಕರ ಶೈಕ್ಷಣಿಕ ಕಾರ್ಯಾಗಾರ

» **ಚಿತ್ರದುರ್ಗ**

ಕರ್ನಾಟಕ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಶಾಖೆ ವತಿಯಿಂದ ಇದೇ ಮಾರ್ಚ್ 6 ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ತರಾಸು ರಂಗಮಂದಿರದಲ್ಲಿ ಚಿತ್ರದುರ್ಗ ಜಿಲ್ಲಾ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಶೈಕ್ಷಣಿಕ ಕಾರ್ಯಾಗಾರ" ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಚಿತ್ರದುರ್ಗ ಶಾಖೆಯ ಅಧ್ಯಕ್ಷ ಜಿ.ಬಿ.ಮಹಂತೇಶ್ ತಿಳಿಸಿದ್ದಾರೆ.

### ಮಾ.6ರಂದು ಈರುಳ್ಳಿ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ತಂತ್ರಜ್ಞಾನದ ಕುರಿತು ತರಬೇತಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕು ಬಬ್ಬೂರುಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಮಾರ್ಚ್ 06ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲೆಯ ರೈತರಿಗೆ ಈರುಳ್ಳಿ ಬೆಳೆಯಲ್ಲಿ ಅನುಸರಿಸ ಬೇಕಾದ ಸುಧಾರಿತ ತಂತ್ರಜ್ಞಾನದ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಬಬ್ಬೂರು ತೋಟಗಾರಿಕೆ ಮಹಾವಿದ್ಯಾಲಯದ ಡಾ. ಪ್ರಕಾಶ್ ಕೆರೂರು ಮತ್ತು ಡಾ. ಶ್ರುತಿ ಹಾಗೂ ಬಬ್ಬೂರು ಫಾರಂ ಕೆವಿಕೆ ಕೀಟಶಾಸ್ತ್ರಜ್ಞ ಡಾ. ರುದ್ರಮುನಿ ಅವರು ಈರುಳ್ಳಿ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳು ಮತ್ತು ಕೀಟ ರೋಗ ನಿರ್ವಹಣೆಯ ಕುರಿತು ವಿಷಯ ಮಂಡನೆ ಮಾಡುವರು. ಆಸಕ್ತ 50 ಜನ ರೈತಭಾಂದವರು ತರಬೇತಿಯಲ್ಲಿ ಭಾಗವಹಿಸಲು ಆರ್.ರಜನೀಕಾಂತ, ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ (8277931058), ಎಂ.ಉಷಾರಾಣಿ, ಸಹಾಯಕ ಕೃಷಿ ನಿರ್ದೇಶಕರು (ರೈ.ಮ) 9980730696, ಟಿ.ಪಿ.ರಂಜಿತಾ, ಕೃಷಿ ಅಧಿಕಾರಿ (8277930959), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (8277931058) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 50 ಜನ ರೈತರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

### ಅಲೆಮಾರಿ ಅಭಿವೃದ್ಧಿ ನಿಗಮದಿಂದ ಜಮೀನು ಖರೀದಿ

» **ಚಿತ್ರದುರ್ಗ**

ಅಲೆಮಾರಿ ಅಭಿವೃದ್ಧಿ ನಿಗಮ ವತಿಯಿಂದ ಭೂ ಒಡೆತನ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಅಲೆಮಾರಿ ಸಮುದಾಯದ ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಭೂ ನೀಡುವ ಸಲುವಾಗಿ ಜಮೀನು ಖರೀದಿ ಮಾಡಲಾಗುವುದು. ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕಿನ ರಾಂಪುರ ಗ್ರಾಮದ ಸುತ್ತಮುತ್ತಲಿನ ಸುಮಾರು 10 ಕಿ.ಮೀ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದವರ ಹೊರತುಪಡಿಸಿ ಬೇರೆ ಸಮುದಾಯದ ಯಾರಾದರೂ ಸಹ ಸರ್ಕಾರಕ್ಕೆ 2 ಅಥವಾ 4 ಎಕರೆ ಜಮೀನು ಮಾರಾಟ ಮಾಡಬಹುದು. ಪ್ರತಿ ಎಕರೆಗೆ ಸೂಕ್ತ ದರ ನಿಗದಿಪಡಿಸಿ ಖರೀದಿಸಲಾಗುವುದು. ಆಸಕ್ತರು ಚಿತ್ರದುರ್ಗದ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರ ಕಛೇರಿ ಚಿತ್ರದುರ್ಗಕ್ಕೆ ಬೇಟಿ ನೀಡಬಹುದು ಅಥವಾ ದೂರವಾಣಿ ಸಂಖ್ಯೆ : 7795457885 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಚರ್ಮದ ಬ್ರಾಂಡೆಡ್ ಉತ್ಪನ್ನಗಳು ರಿಯಾಯಿತಿ ದರದಲ್ಲಿ ಮಾರಾಟ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಡಾ. ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಲಿಡ್‍ಕರ್ ಲೆದರ್ ಎಂಪೋರಿಯಂ ಮಾರಾಟ ಮಳಿಗೆಯಲ್ಲಿ ಶೇ.10, ಶೇ.20 ಹಾಗೂ ಶೇ.30 ರಷ್ಟು ರಿಯಾಯಿತಿ ದರದಲ್ಲಿ ಅತ್ಯುತ್ತಮ ಗುಣಮಟ್ಟದ ಅಪ್ಪಟ ಚರ್ಮದ ಬ್ರಾಂಡೆಡ್ ಉತ್ಪನ್ನಗಳು ಈಗಾಗಲೇ ಇದೇ ಮಾರ್ಚ್ 03 ರಿಂದ ಮಾರಾಟ ಪ್ರಾರಂಭವಾಗಿದ್ದು, ಮಾರ್ಚ್ 27ರವರೆಗೆ ರಿಯಾಯಿತಿ ದರದಲ್ಲಿ ದೊರೆಯುತ್ತವೆ. ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯ ಪ್ರವಾಸಿ ಮಂದಿರದ ಹತ್ತಿರದ ಜಿಲ್ಲಾ ಸ್ತ್ರೀ ಶಕ್ತಿ ಶಾಪಿಂಗ್ ಕಾಂಪ್ಲೇಕ್ಸ್ ನಂ.8ರ ಲಿಡ್ಕರ್ ಮಾರಾಟ ಮಳಿಗೆಗೆ ಗ್ರಾಹಕರು ಭೇಟಿ ನೀಡಿ, ಇದರ ಸದುಪಯೋಗ ಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194-226651 ಗೆ ಸಂಪರ್ಕಿಸಬಹುದು ಎಂದು ಲಿಡ್‍ಕರ್ ಲೆದರ್ ಎಂಪೋರಿಯಂ ವ್ಯವಸ್ಥಾಪಕರು ತಿಳಿಸಿದ್ದಾರೆ.

# ಕಬೀರಾನಂದ ಮಠ ಜಾತ್ಯಾತೀತ ಆಶ್ರಮ; ಶಾಸಕ

» **ಚಿತ್ರದುರ್ಗ**





ಇಂದಿನ ದಿನಮಾನದಲ್ಲಿ ಎಲ್ಲಾ ಜಾತಿಗೊಂದು ಮಠವನ್ನು ನಿರ್ಮಾಣ ಮಾಡಿಕೊಂಡಿದ್ದಾರೆ. ಆದರೆ ಕಬೀರಾನಂದ ಆಶ್ರಮ ಮಾತ್ರ ಜಾತ್ಯಾತೀತ ಆಶ್ರಮವಾಗಿ ಎಲ್ಲರನ್ನು ಅಪ್ಪಿಕೊಳ್ಳುವ ಮನೋಭಾವವನ್ನು ಹೊಂದಿದ್ದು, ಶಿವಲಿಂಗಾನಂದ ಆಪ್ಪಗಳು ಎಲ್ಲರನ್ನು ಅಪ್ಪಿಕೊಳ್ಳುವ ಶ್ರೀಗಳಾಗಿದ್ದಾರೆ ಎಂದು ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ತಿಳಿಸಿದ್ದಾರೆ.

ನಗರದ ಶ್ರೀ ಕಬೀರಾನಂದಾಶ್ರಮದವತಿಯಿಂದ ಶ್ರೀಮಠದಆವರಣದಲ್ಲಿನಿರ್ಮಿತವಾಗಿರುವ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಮಹಾ ಮಂಟಪದಲ್ಲಿ ನಡೆದ 94ನೇ ಮಹಾ ಶಿವರಾತ್ರಿ ಮಹೋತ್ಸವವ ಕಾರ್ಯಕ್ರಮದ ಪ್ರಾರಂಭ ದಿನವಾದ ಸೋಮವಾರ ರಾತ್ರಿ ಸಭಾ ಮಂಟಪ ಹಾಗೂ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ದಿನದಲ್ಲಿ ಗುರುಗಳಿಗಿಂತ ಅಧಿಕರಾವದರು ಯಾರೂ ಇಲ್ಲವಾಗಿದ್ದಾರೆ. ಗುರುವೇ ಶ್ರೇಷ್ಟ, ಗುರುಗಳ ಆರ್ಶಿವಾದ ಮಾನವ ಜೀವನದಲ್ಲಿ ಏಳು ಬೀಳುಗಳನ್ನು ಸರಿದೂಗಿಸುತ್ತದೆ. ನಾವುಗಳು ಲೌಕಿಕ ಬದುಕಿಗೆ ಸಂಬಂಧಪಟ್ಟವರು, ಶ್ರೀ ಮಠ ಜಾತಿ ಮತ ಪಂಥಗಳನ್ನು ಮೀರಿ ಬೆಳೆದಿದೆ. ಇಲ್ಲಿ ಬರುವವರಿಗೆ ಯಾವುದೇ ಜಾತಿ ಇಲ್ಲ ಎಲ್ಲರು ಒಂದೇ ಎಂದರು.

1972ರಲ್ಲಿ ಶಿವಲಿಂಗಾನಂದ ಶ್ರೀಗಳು ಶ್ರೀ ಮಠಕ್ಕೆ ಬಂದಾಗ ಇಲ್ಲಿ ಯಾವುದೇ ರೀತಿಯ ಸೌಲಭ್ಯ ಇರಲಿಲ್ಲ. ತದ ನಂತರ ಹಂತ, ಹಂತವಾಗಿ ಬೆಳವಣಿಗೆಯನ್ನು ಕಂಡರು ಗೋಶಾಲೆ ನಿರ್ಮಾಣ, ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭ ಮಾಡುವುದರ ಮೂಲಕ ವಿದ್ಯಾದಾನ ಮಾಡಿ, ವೃದ್ದಾಶ್ರಮ, ಮಕ್ಕಳಿಗೆ ಉಚಿತವಾಗಿ ವಿದ್ಯಾಭ್ಯಾಸ ನೀಡುವುದರ ಮೂಲಕ ಭಕ್ತಾಧಿಗಳಿಗೆ ಮಾರ್ಗದರ್ಶನ ಮಾಡಿಕೊಂಡು ಶಿಕ್ಷಣ ಸಂಸ್ಥೆ ಮತ್ತು ಮಠವನ್ನು ನಡೆಸುತ್ತಿದ್ದಾರೆ. ಚಿತ್ರದುರ್ಗದಲ್ಲಿ ಮೊಟ್ಟ ಮೊದಲ ಬಾರಿಗೆ ದೈಹಿಕ ಶಿಕ್ಷಣವನ್ನು ಪ್ರಾರಂಭ ಮಾಡಿದ ಕೀರ್ತಿ ಶ್ರೀಗಳಿಗೆ ಸಲ್ಲುತ್ತದೆ. ಶ್ರೀ ಮಠ ಜಾತಿಯ ಬಗ್ಗೆ ಯಾವುದೇ ಮನೋಭಾವ ಇಲ್ಲದೆ ಎಲ್ಲರನ್ನು ಸಹಾ ತಮ್ಮವರು ಎಂದು ತಿಳಿದು ಕೆಲಸವನ್ನು ಮಾಡುತ್ತಿದೆ, ಸೇವೆಯನ್ನು ಪೂಜೆಯ ರೂಪದಲ್ಲಿ ಮಾಡುತ್ತಾ ಬಂದಿದ್ದಾರೆ ಎಂದು ತಿಳಿಸಿದರು.

ಹುಬ್ಬಳ್ಳಿಯ ಜಡೆ ಸಿದ್ದೇಶ್ವರ ಮಠದ ಶ್ರೀ ರಮಾನಂದ ಶ್ರೀಗಳು, ಮಾತನಾಡಿ, ಗುರುವಿಗಿಂತಅಧಿಕರಾದವರುಸಮಾಜದಲ್ಲಿ ಯಾರೂ ಇಲ್ಲ, ಎಂದು ವೇದಗಳಲ್ಲಿಯೇ ತಿಳಿಸಲಾಗಿದೆ. ಭಗವಂತನಿಗಿಂತ ಮುಂಚೆ ಗುರುವಿಗೆ ನಮಸ್ಕಾರ ಮಾಡಿ ಮುಂದೆ ಹೋಗಬೇಕಿದೆ, ಗುರು ಮತ್ತು ಭಗವಂತ ಇಬ್ಬರಲ್ಲಿ ಅಂತರವಿದೆ. ದೇವತೆಗಳು ಸಹಾ ಗುರುವಿನ ಕಾರುಣ್ಯವನ್ನು ಪಡೆಯಬೇಕಿದೆ. ಭೂಮಿಯ ಮೇಲೆ ಜನಿಸಿದ ಎಲ್ಲರು ಸಹಾ ಗುರುವಿನ ಗುಲಾಮರಾಗುವುದರ ಮೂಲಕ ಮುಕ್ತಿಯನ್ನು ಪಡೆಯಬೇಕಿದೆ. ಗುರುವಿಗೆ ಶರಣಾದರೆ ಹೃದಯದ ಅಜ್ಞಾನ ಕಳೆಯುತ್ತದೆ. ಸೂರ್ಯ ಚಂದ್ರರಿಂದಲೂ ಸಹಾ ಮಾನವನ ಅಜ್ಞಾನ ಕಳೆಯಲು ಸಾಧ್ಯವಿಲ್ಲ ಆದರೆ ಈ ಕೆಲಸವನ್ನು ಗುರು ಮಾಡುತ್ತಾನೆ ಎಂದರು.

ಗುರುವಿಲ್ಲದ ವಿದ್ಯೆ ರಾಮನಿಲ್ಲದ ಅಯೋಧ್ಯ ರೀತಿಯಲ್ಲಿ ಇರುತ್ತದ. ಸಮಾಜದಲ್ಲಿ ಯಾವ ಪದವಿಯನ್ನು ಬೇಕಾದರೂ ಪಡೆಯಬಹುದು ಆದರೆ ಗುರುವಿನ ಒಲವು ಇಲ್ಲದೆ ಆತ್ಮಜ್ಞಾನ ಪಡೆಯಲು ಸಾಧ್ಯವಿಲ್ಲ, ಉತ್ತಮ ಜ್ಞಾನವುಳ್ಳ ಗುರುವಿಗೆ ಉತ್ತಮನಾದ ಶಿಷ್ಯ ಬೇಕಿದೆ, ಅದೇ ರೀತಿ ಉತ್ತಮವಾದ ಶಿಷ್ಯನಿಗೆ ಜ್ಞಾನವುಳ್ಳ ಗುರುವಿನ ಅಗತ್ಯ ಇದೆ ಎಂದು ಹೇಳಿದರು.ಬಾಗಲಕೋಟೆಯ ಆರಿಕೆರೆಯ ಶ್ರೀ ಕೌಧೀಶ್ವರ ಮಹಾ ಸಂಸ್ಥಾನದ ಶ್ರೀ ಮಾಧವಾನಂದ ಶ್ರೀಗಳು ಮಾತನಾಡಿ, ಋಷಿಮುನಿಗಳು, ದೇವತೆಗಳಿಗೂ ಸಹಾ ಗುರುವಿನ ಅಗತ್ಯ ಇದೆ. ಅವರ ಕೃಪಾದೃಷ್ಟಿಯಿಂದಲೇ ಮುಕ್ತಿಯನ್ನು ಪಡೆಯಬೇಕಿದೆ, ಗುರುವಿಗೆ ಶರಣಾಗತಿಯಾದರೆ ಓಳ್ಳೆಯ ವಿಚಾರವನ್ನು ಪಡೆಯಬಹುದಾಗಿದೆ. ಮೋಕ್ಷವನ್ನು ಡಪೆಯುವ ಮಾರ್ಗವನ್ನು ಗುರುಗಳು ತಿಳಿಸುತ್ತಾರೆ. ಪುಣ್ಯದ ಸಂಪಾದನೆಯಲ್ಲಿಯೂ ಸಹಾ ಗುರುವಿನ ಮಾರ್ಗದರ್ಶನ ಇದೆ. ಮಾನವ ಜನ್ಮ ಪಾವನಕ್ಕೆ ಗುರುವಿನ ಕೃಪೆ ಅಗತ್ಯವಾಗಿದೆ ಎಂದರು.

ಶ್ರೀ ಸದ್ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳು ಮಾತನಾಡಿ, ಗುರುವಿಗಿಂತ ಅಧಿಕವಾದದ್ದು ಯಾವುದೂ ಇಲ್ಲ, ಗುರು ದೊಡ್ಡವನಿದ್ದಾನೆ, ಗುರುವಾದವನು ಭಕ್ತನ ಮನಸ್ಸನ್ನು ಸ್ವಚ್ಚಮಾಡುತ್ತಾನೆ, ಗುರು ನಿರಾಭಾರವಾಗಿದ್ದಾನೆ, ಗುರುವಿನ ಕೃಪೆ ಇದ್ದರೇ ಏನು ಬೇಕಾದರೂ ಸಾಧನೆಯನ್ನು ಮಾಡಬಹುದಾಗಿದೆ ಎಂದು ತಿಳಿಸಿದರು.

ವಿಜಯಪುರದ ಶ್ರೀ ಷಣ್ಮುಖಾರೂಢ ಮಠದ ಶಾಂತಾಶ್ರಮದ ಶ್ರೀ ಅಭಿನವ ಸಿದ್ಧಾರೂಢ ಶ್ರೀಗಳು ಸಾನಿಧ್ಯವಹಿಸಿದ್ದರು. 94ನೇ ಮಹಾ ಶಿವರಾತ್ರಿ ಸಪ್ತಾಹದ ಅಧ್ಯಕ್ಷರಾದ ಕೆ.ಸಿ.ನಾಗರಾಜು, ಮರ್ಚೆಂಟ್ ಬ್ಯಾಂಕ್ ಅಧ್ಯಕ್ಷರಾದ ಲಕ್ಷ್ಮೀಕಾಂತರೆಡ್ಡಿ, ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿನಯ್ ತಿಮ್ಮಾಪುರ, ಜಿ.ಪಂ. ಮಾಜಿ ಉಪಾಧ್ಯಕ್ಷರಾದ ದ್ಯಾಮಣ್ಣ ಭಾಗವಹಿಸಿದ್ದರು.

ಅಂಜನಾ ನೃತ್ಯ ಕಲಾ ಕೇಂದ್ರದ ಶ್ರೀಮತಿ ನಂದಿನಿ ಶಿವಪ್ರಕಾಶ್ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ ಶ್ರೀ ವೆಂಕಟಾದ್ರಿ ಭಜನಾ ಮಂಡಳಿಯ ಶ್ರೀಮತಿ ವರಲಕ್ಷ್ಮೀ ಮತ್ತು ತಂಡದಿಂದ ಭಜನಾ ಕಾರ್ಯಕ್ರಮ ನಡೆಯಿತು.ಸುಬ್ರಾಯ್ ಭಟ್ರುವೇದ ಘೋಷ ಮಾಡಿದರೆ ಶಿಕ್ಷಕಿ ಸುಮನಾ ಪ್ರಾರ್ಥಿಸಿದರೆ ಕಾರ್ಯದರ್ಶಿ ವಿ.ಎಲ್.ಪ್ರಶಾಂತ್ ಸ್ವಾಗತಿಸಿದರು, ಶ್ರೀಮತಿ ವಿಮಲಾಕ್ಷ್ಮಿ ಕಾರ್ಯಕ್ರಮ ನಿರೂಪಿಸಿದರು.

# ಬಿಜೆಪಿ ಬಿ.ಫಾರಂ ನೀಡಿದಿದ್ದರೆ ಸ್ವತಂತ್ರವಾಗಿ ಸ್ಪರ್ಧೆ

» **ಚಿತ್ರದುರ್ಗ**



ಈ ಬಾರಿ 2024ರ ಲೋಕಸಭಾ ಚುನಾವಣೆಗೆ ನನಗೆ ಜನತಾ ಪಕ್ಷದ ವತಿಯಿಂದ ಸ್ಥಳೀಯವನಾದ ನನಗೆ ಪಕ್ಷದ ಹಿರಿಯರು ನನಗೆ ಪರಿಗಣಿಸಿ ಬಿ.ಫಾರಂ ನೀಡದರೆ ಪಕ್ಷದವತಿಯಿಂದ ಸ್ಪರ್ಧೆ ಮಾಡುತ್ತೇನೆ. ಇಲ್ಲವಾದಲ್ಲಿ ಒಂದು ವೇಳೆ ನನಗೆ ಬಿಜೆಪಿ ಯಿಂದ ಟಿಕೆಟ್ ನಿರಾಕರಿಸಿದಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಚುನಾವಣೆಗೆ ಸ್ಪರ್ಧಿಸಲು ಸಿದ್ಧನಿದ್ದೇನೆ ಎಂದು ನಿವೃತ್ತ ಶಿಕ್ಷಕ ಹೆಚ್.ಕಾಂತಪ್ಪ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಚಿತ್ರದುರ್ಗ ಜಿಲ್ಲೆ ವಾಸಿಯಾದ ನಾನು 1978 ರಿಂದ ರಾಜಕೀಯಕ್ಕೆ ಪ್ರವೇಶ ಮಾಡಿರುತ್ತೇನೆ. ಜನಗಳ ಹಿತದೃಷ್ಟಿಯಿಂದ ರಾಜಕೀಯವನ್ನು ಬಳಸಿಕೊಂಡು ಬಂದೆ. ನಂತರ ನಮ್ಮ ಮನೆಯಲ್ಲಿ ನನ್ನ ಸ್ವಂತ ಅಣ್ಣನವರು ಜಿಲ್ಲಾಪಂಚಾಯತ್ ಸದಸ್ಯರಾದರು.

ಅದರಿಂದ ನನಗೆ ಇನ್ನು ಸ್ವಲ್ಪ ಜನ ಹೆಚ್ಚಿನದಾಗಿ ಹತ್ತಿರವಾದರು. ಅದೇ ರೀತಿ ನಮ್ಮ ಮನೆಯವರಿಗೂ ಸಹ ಒಂದು ಬಾರಿ ತಾಲ್ಲೂಕುಪಂಚಾಯತಿ ಸದಸ್ಯರಾಗಿ ಸ್ಪರ್ಧಿಸಲು ಜನತಾ ಪಕ್ಷದ ವತಿಯಿಂದ ಬಿ.ಫಾರಂ ನೀಡುತ್ತಿರುತ್ತಾರೆ. ಅದರಿಂದಲೂ ಸಹ ಹೆಚ್ಚಿನ ಜನ ಪರಿಚಯಸ್ಥರಾದರು. ಕಳೆದ 10 ವರ್ಷಗಳಿಂದ ಭಾರತೀಯ ಜನತಾಪಾರ್ಟಿಯಲ್ಲಿ ಸದಸ್ಯನಾಗಿ ಕೆಲಸ ಮಾಡಿಕೊಂಡು ಬಂದಿರುತ್ತೇನೆ. ಆದ್ದರಿಂದ ನನಗೆ ಭಾರತೀಯ ಜನತಾ ಪಕ್ಷದ ವತಿಯಿಂದ 2024ರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಇಚ್ಚಿಸಿದ್ದು, ನನಗೆ ಬಿ.ಫಾರಂ ನೀಡಲು ಕೋರುತ್ತೇನೆ ಎಂದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ನನಗೆ ತಿಳಿದಂತೆ 1978 ರಿಂದ ಇಲ್ಲಿಯವರೆಗೂ ಹೊರಗಿನವರಿಗೆ ಹೆಚ್ಚು ಒತ್ತು ನೀಡುತ್ತಿದ್ದು, ಸ್ಥಳಿಯರಿಗೆ ಟಿಕೇಟ್ ನೀಡಲು ಕಾಂಗ್ರೆಸ್ ಪಕ್ಷವು ಆಗಿರಬಹುದು. ಭಾರತೀಯ ಜನತಾ ಪಕ್ಷವು ಆಗಿರಬಹುದು.

ಯಾವುದೇ ಪಕ್ಷದವರು ಸಹ ಸ್ಥಳಿಯರಿಗೆ ಟಿಕೇಟ್ ನೀಡಿರುವುದಿಲ್ಲ. ಈ ಬಾರಿ 2024ರ ಲೋಕಸಭಾ ಚುನಾವಣೆಗೆ ನನಗೆ ಜನತಾ ಪಕ್ಷದ ವತಿಯಿಂದ ಬಿ.ಫಾರಂ ನೀಡದರೆ ಸ್ಪರ್ಧೆ ಮಾಡುತ್ತೇನೆ ಇಲ್ಲವಾದಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಚುನಾವಣೆಗೆ ಸ್ಪರ್ಧಿಸಲು ಸಿದ್ಧನಿದ್ದೇನೆ ಎಂದು ಕಾಂತಪ್ಪ ಸ್ಪಷ್ಟಪಡಿಸಿದರು.

ಗೋಷ್ಟಿಯಲ್ಲಿ ಲೋಕಪ್ಪ, ಜಯ್ಯಣ್ಣ ಉಪಸ್ಥಿತರಿದ್ದರು.

# ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳು ಯಾರಿಗೂ ಹಣ ನೀಡಬೇಡಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳು ಯಾವುದೇ ಮಧ್ಯವರ್ತಿಗಳಿಗೆ ಹಣ ನೀಡಬಾರದು. ಯಾರಾದರೂ ಹಣ ಕೇಳಿದಲ್ಲಿ ಕೂಡಲೇ ಜಿಲ್ಲಾ ಶಸ್ತ್ರಚಿಕಿತ್ಸಕರ ಗಮನಕ್ಕೆ ತರಬೇಕು. ರೋಗಿಗಳು ಯಾರಿಗೂ ಹಣ ನೀಡಿ ಪ್ರೋತ್ಸಾಹಿಸಬಾರದು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಮನವಿ ಮಾಡಿದ್ದಾರೆ. ರೋಗಿಗಳು ಆಸ್ಪತ್ರೆಗೆ ಬರುವಾಗ ತಪ್ಪದೇ ಆಧಾರ ಕಾರ್ಡ್ ಮತ್ತು ಪಡಿತರ ಚೀಟಿ ತೆಗೆದುಕೊಂಡು ಬರಬೇಕು. ರೋಗಿಗಳು ಆಸ್ಪತ್ರೆಯಲ್ಲಿ ದಾಖಲಾದಾಗ ರೋಗಿಯವರನ್ನು ನೋಡಲು ನಿಗಧಿತ ಸಮಯದಲ್ಲಿ ಮಾತ್ರ ಸಾರ್ವಜನಿಕರು ಆಸ್ಪತ್ರೆಗೆ ಭೇಟಿ ನೀಡಬೇಕು. ರೋಗಿಯ ಜೊತೆಯಲ್ಲಿ ಒಬ್ಬರು ಅಥವಾ ಇಬ್ಬರು ಅಟೆಂಡರ್ಸ್ ಮಾತ್ರ ಇರುವುದು. ರೋಗಿಗಳು ಇತ್ತೀಚಿನ ದಿನಗಳಲ್ಲಿ ನೇರವಾಗಿ ಖಾಸಗಿ ಆಸ್ಪತ್ರೆಗೆ ತೆರಳಿ ತದಂತರ ಬಂದು ರೆಫರಲ್‍ಗಾಗಿ ಜಿಲ್ಲಾಸ್ಪತ್ರೆಯ ವೈದ್ಯಾಧಿಕಾರಿಗಳಿಗೆ ಒತ್ತಡ ಹಾಕುತ್ತಿರುವುದು ಕಂಡುಬಂದಿರುತ್ತದೆ. ಹೀಗಾಗಿ ಇಂತಹ ಕ್ರಮಗಳಿಗೆ ಯಾರೂ ಕೂಡ ಮುಂದಾಗದೆ, ಮೊದಲು ಸರ್ಕಾರಿ ಆಸ್ಪತ್ರೆಗೆ ಬಂದು ಚಿಕಿತ್ಸೆ ಪಡೆಯಬೇಕು. ಒಂದು ವೇಳೆ ಚಿಕಿತ್ಸೆಯು ಸರ್ಕಾರಿ ಆಸ್ಪತ್ರೆಯಲ್ಲಿ ಲಭ್ಯವಿಲ್ಲದಿದ್ದಾಗ ಮಾತ್ರ ಎಬಿ-ಎಆರ್‍ಕೆ ಯೋಜನೆಯಡಿಯಲ್ಲಿ ಬೇರೆ ಆಸ್ಪತ್ರೆಗೆ ರೆಫರಲ್ ಮಾಡಿಕೊಡಲಾಗುವುದು. ಎಬಿ-ಎಆರ್‍ಕೆ ಅಡಿಯಲ್ಲಿ ದಾಖಲಾದ ಎಲ್ಲಾ ರೋಗಿಗಳಿಗೆ ಉಚಿತ ಚಿಕಿತ್ಸೆಯನ್ನು ನೀಡಲಾಗುವುದು. ಯಾವುದೇ ದೂರುಗಳು ಇದ್ದಲ್ಲಿ ತಕ್ಷಣವೇ ಜಿಲ್ಲಾ ಶಸ್ತ್ರಚಿಕಿತ್ಸಕರ ಗಮನಕ್ಕೆ ತರಬೇಕು ಎಂದರು.

# ಮಹಾಶಿವರಾತ್ರಿ ಪ್ರಯುಕ್ತ 40 ಅಡಿ ಎತ್ತರದ ಶಿವಲಿಂಗ ದರ್ಶನ ಕಾರ್ಯಕ್ರಮ: ವಿಮಲಕ್ಕ

» **ಚಳ್ಳಕೆರೆ**



ವಿಶ್ವದ ಇತಿಹಾಸದಲ್ಲಿ ಭಾರತೀಯ ಸಂಸ್ಕೃತಿಗೆ ವಿಶೇಷ ಸ್ಥಾನಮಾನವಿದೆ. ಧಾರ್ಮಿಕ ಕಾರ್ಯಕ್ರಮಗಳ ಜೊತೆಯಲ್ಲೇ ಮಹಾನ್ ದಾರ್ಶನಿಕರು ಜನಿಸಿದನಾಡು ಭಾರತವಾಗಿದ್ದು, ಮಾನವ ಕುಲದ ಸರ್ವತೋಮುಖ ಒಳಿತಿಗಾಗಿ ಶ್ರಮಿಸಿದ ಶರಣು ಹಾಗೂ ವಿಶ್ವರೂಪಿಯಾದ ಶಿವನನ್ನು ಎಲ್ಲರೂ ಭಕ್ತಿಶ್ರದ್ಧೆಯಿಂದ ಪೂಜಿಸುವ ಮಹಾಶಿವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯವಿಶ್ವವಿದ್ಯಾಲಯ ಮೂರು ದಿನಗಳ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದು ಸಂಸ್ಥೆಯ ಮುಖ್ಯಸ್ಥೆ ವಿಮಲಕ್ಕ ತಿಳಿಸಿದರು.

ಅವರು, ಮಂಗಳವಾರ ಕಚೇರಿಯಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿದ್ಯಾಲಯದ ಸಹಯೋಗದಲ್ಲಿ ಮಹಾಶಿವರಾತ್ರಿ ಮಹೋತ್ಸವವನ್ನು ಆಚರಣೆ ಮಾಡುತ್ತಾ ಬಂದಿದ್ದು, ಈ ಬಾರಿ ವಿಶೇಷವಾಗಿ ಮಾ.7ರ ಗುರುವಾರ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ 40 ಅಡಿ ಎತ್ತರದ ಶಿವಲಿಂಗದೊಳಗೆ ಜಗಮಗಿಸುವ ಭಾರತ, ಭಾರತದೊಳಗೆ ದ್ವಾದರ್ಶಜ್ಯೋರ್ತಿಂಗ ದರ್ಶನವನ್ನು ಹಮ್ಮಿಕೊಂಡಿದ್ದು, ಎಲ್ಲಾ ಶಿವಭಕ್ತರು ಹಾಗೂ ಸಾರ್ವಜನಿಕರು ಮೂರು ದಿನಗಳು ನಡೆಯುವ ಕಾರ್ಯಕ್ರಮಕ್ಕೆ ಆಗಮಿಸಿ ಉಚಿತವಾಗಿ ಶಿವಲಿಂಗ ದರ್ಶನ ಪಡೆಯುವಂತೆ ಮನವಿ ಮಾಡಿದ್ದಾರೆ.


ಮಾರ್ಚ್7ರ ಗುರುವಾರ ಸಂಜೆ 6ಕ್ಕೆ ಕಾರ್ಯಕ್ರಮವನ್ನು ಬಿಇಒ ಕೆ.ಎಸ್.ಸುರೇಶ್ ಉದ್ಘಾಟಿಸಲಿದ್ದಾರೆ.

## ಪ್ರಮುಖ ಸುದ್ದಿ

### ಮಾ.7 ರಿಂದ 9ರವರೆಗೆ ಕಾರ್ಯಕ್ರಮ –ಗೌರವಾಧ್ಯಕ್ಷ ಎಸ್.ವಿ.ಗುರುಮೂರ್ತಿ ಮಾಹಿತಿ

# 31 ಅಡಿ ಎತ್ತರದ ಶಿವನ ಪ್ರತಿಮೆ ಲೋಕಾರ್ಪಣೆಗೆ ಸಿದ್ಧತೆ

» **ಚಿತ್ರದುರ್ಗ**





ನಗರದ ಜೋಗಿಮಟ್ಟಿ ರಸ್ತೆಯ ರುದ್ರಭೂಮಿಯ ಬಳಿ ಬರೋಬ್ಬರಿ 31 ಅಡಿ ಎತ್ತರದ ಧ್ಯಾನಮಗ್ನ ಶಿವನ ಪ್ರತಿಮೆ ತಲೆ ಎತ್ತಿದೆ. ಇದರ ಲೋಕಾರ್ಪಣೆ ಕಾರ್ಯಕ್ರಮವೂ ಮಾ.7 ರಿಂದ 9ರವರೆಗೆ ನಡೆಯಲಿದೆ ಎಂದು ಶ್ರೀ ಮುಕ್ತಿನಾಥೇಶ್ವರ ಸ್ವಾಮಿ ದೇವಸ್ಥಾನ ಹಾಗೂ ಸಾರ್ವಜನಿಕ ಹಿಂದೂರುದ್ರಭೂಮಿಸೇವಾಸಮಿತಿಟ್ರಸ್ಟ್‌ನ ಗೌರವಾಧ್ಯಕ್ಷ ಎಸ್.ವಿ.ಗುರುಮೂರ್ತಿ ತಿಳಿಸಿದ್ದಾರೆ.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಟಿಯಲ್ಲಿ ಈ ಮಾಹಿತಿಯನ್ನು ನೀಡಿದ ಅವರು, ಶಿವರಾತ್ರಿ ಸಂಭ್ರಮಕ್ಕೆ ಭಕ್ತರಿಗೆ ದರ್ಶನದ ಭಾಗ್ಯ ಕಲ್ಪಿಸಿದೆ. ಈ ಪ್ರತಿಮೆಯ ಲೋಕಾರ್ಪಣೆ ಹಾಗೂ 3 ನೇ ವರ್ಷದ ಮಹಾಶಿವರಾತ್ರಿ ಮಹೋತ್ಸವ ನಡೆಯಲಿದೆ. ಶಿವಮೊಗ್ಗದ ಶಿಲ್ಪಿ ಎಸ್.ಪಿ.ವಿಜಯ ಕುಮಾರ್ ಕೈಯಲ್ಲಿ ಶಿವನ ಪ್ರತಿಮೆ ಅರಳಿದೆ. ಇದರ ನಿರ್ಮಾಣಕ್ಕೆ ಸರ್ಕಾರದವತಿಯಿಂದ ಯಾವುದೇ ರೀತಿಯ ಧನ ಸಹಾಯವನ್ನು ಪಡೆಯದೇ ದಾನಿಗಳಿಂದ ಈ ಪ್ರತಿಮೆಯನ್ನು ಸುಮಾರು 35 ಲಕ್ಷ ರೂ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ. ಸುಮಾರು 10 ಎಕರೆ ವಿಸ್ತೀರ್ಣದಲ್ಲಿ ಇರುವ ಈ ರುದ್ರಭೂಮಿಯಲ್ಲಿ 14 ಸಮುದಾಯದವರು ಅಂತ್ಯಕ್ರಿಯೆಯನ್ನು ನಡೆಸಲಿದ್ದಾರೆ ಎಂದರು.

ಮಾರ್ಚ್ 7 ರ ಬೆಳಿಗ್ಗೆ 9 ಗಂಟೆಗೆ ನಗರದ ನೀಲಕಂಠೇಶ್ವರ ದೇವಸ್ಥಾನದ ಆವರಣದಿಂದ ಪುಷ್ಪಾಲಂಕೃತ ಬೆಳ್ಳಿ ರಥದಲ್ಲಿ ಶ್ರೀ ಮುಕ್ತಿನಾಥೇಶ್ವರ ಸ್ವಾಮಿ ಭಾವಚಿತ್ರದ ಮೆರವಣಿಗೆ ಪ್ರಾರಂಭವಾಗಲಿದೆ. ದೇವಸ್ಥಾನದಿಂದ ಗಾಂಧಿ ವೃತ್ತ, ಚಿಕ್ಕಪೇಟೆ, ದೊಡ್ಡಪೇಟೆ, ರಂಗಯ್ಯನ ಬಾಗಿಲು, ಕರುವಿನಕಟ್ಟೆ ವೃತ್ತ, ಜಟ್‍ಪಟ್ ನಗರ ವೃತ್ತದ ಮಾರ್ಗವಾಗಿ ದೇವಸ್ಥಾನ ತಲುಪಲಿದೆ. ಮೆರವಣಿಗೆಯಲ್ಲಿ ಪೂರ್ಣಕುಂಭ ಹೊತ್ತ ಮಹಿಳೆಯರು, ಗೊರವ ಕುಣಿತ, ಟ್ರಾಶ್ ವಾದ್ಯ, ಉರುಮೆ ಮತ್ತು ಶಾರದ ಬ್ರಾಸ್ ಬ್ಯಾಂಡ್ ವಾದ್ಯಗಳು ಸಾಗಲಿವೆ ಎಂದು ತಿಳಿಸಿದರು.ಮಾರ್ಚ್ 8 ರಂದು ಬ್ರಾಹ್ಮಿ ಮುಹೂರ್ತದಲ್ಲಿ ಬೆಳಗಿನ ಜಾವ 5 ರಿಂದ 5.30 ರವರೆಗೆ ಕಬೀರಾನಂದ ಮಠದ ಶ್ರೀ ಶಿವಲಿಂಗಾನಂದ ಸ್ವಾಮೀಜಿ ಅಮೃತ ಹಸ್ತದಲ್ಲಿ 31 ಅಡಿ ಎತ್ತರದ ಧ್ಯಾನಮಗ್ನ ಶಿವನ ಪ್ರತಿಮೆ ಲೋಕಾರ್ಪಣೆಗೊಳ್ಳಲಿದೆ. ನಂತರ ಮುಕ್ತಿನಾಥೇಶ್ವರ ಸ್ವಾಮಿಗೆ ರುದ್ರಾಭಿಷೇಕ, ವಿಶೇಷ ಅಲಂಕಾರ ಹಾಗೂ ಸಂಜೆ 6.30ಕ್ಕೆ ಮುಕ್ತಿನಾಥೇಶ್ವರ ಸ್ವಾಮಿಗೆ ವಿಶೇಷ ಪೂಜೆ ರಾತ್ರಿ 8.30 ಸಂಗೀತ ಕಾರ್ಯಕ್ರಮ ಶಿವ ಭಜನೆ, ಮಾರ್ಚ್ 9ರ ಬೆಳಿಗ್ಗೆ 11.30ರಿಂದ ಅನ್ನ ಸಂತರ್ಪಣೆ ನಡೆಯಲಿದೆ ಎಂದರು.

## ಫಾಸ್ಟ್ ನ್ಯೂಸ್

### ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಬಸವರಾಜು ವಿ ಶಿವಗಂಗಾ ಚಾಲನೆ



» **ಚನ್ನಗಿರಿ**

ಸಂತೆಬೆನ್ನೂರಲ್ಲಿ ಶಾಸಕರಾದ ಬಸವರಾಜು ವಿ ಶಿವಗಂಗಾ ಕರ್ನಾಟಕ ಸರ್ಕಾರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಚನ್ನಗಿರಿ ಸಂಬಂಧಿಸಿದಂತೆ ಸರ್ಕಾರದ ಆರ್‌ಐಡಿಎಫ್ 29 ಯೋಜನೆಯಡಿಯಲ್ಲಿ ನಾಗೇನಹಳ್ಳಿ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ಗೋಧಾಮು, ಕ್ಯಾಂಟೀನ್ ಕಟ್ಟಡ ಹಾಗೂ ಆರ್ ಸಿ ಸಿ ಡ್ರೈವ್ ನಿರ್ಮಾಣ ಒಟ್ಟು ಎರಡುವರೆ ಕೋಟಿ ಮೌಲ್ಯದ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದರು, ಉಳಿದಂತೆ ನಲ್ಲೂರು ಹಾಗೂ ರಾಜಗೊಂಡನಹಳ್ಳಿ ಸೇರಿದಂತೆ ಹಲವೆಡೆ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ಶಂಕು ಸ್ಥಾಪನೆ ನೇರವೆರಿಸಿದರು. ಈ ಸಂಧರ್ಭದಲ್ಲಿ ಇಲಾಖೆ ಅಧಿಕಾರಿಗಳು ಹಾಗೂ ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

### ಚಳ್ಳಕೆರೆಯಮ್ಮ ದೇವಸ್ಥಾನದ ಅರ್ಚಕ ಮಲ್ಲಿಕಾರ್ಜುನಪ್ಪ ನಿಧನ

» **ಚಳ್ಳಕೆರೆ**



ನಗರದ ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮ ದೇವಸ್ಥಾನದ ಪಾರಂಪರಿಕ ಪೂಜಾರಿ ಮನೆತನದ ಪೂಜಾರಿ ಮಜ್ಜಿಗೆ ಮಲ್ಲಿಕಾರ್ಜುನಪ್ಪ ಸೋಮವಾರ ಬೆಳಗಿನ ಜಾವ ನಿಧನರಾದರು. ಎಂದಿನಂತೆ ದಿನನಿತ್ಯದ ಕೆಲಸ ಕಾರ್ಯಮುಗಿಸಿಕೊಂಡು ಬಂದ ಮಲ್ಲಿಕಾರ್ಜುನಪ್ಪ ಆರೋಗ್ಯದಲ್ಲಿ ಏರುಪೇರಾದ ಹಿನ್ನೆಲೆಯಲ್ಲಿ ಚಿತ್ರದುರ್ಗ ಆಸ್ಪತ್ರೆಗೆ ಕರೆದ್ಯೊಯುವ ಸಂದರ್ಭದಲ್ಲಿ ಮಾರ್ಗಮಧ್ಯದಲ್ಲಿ ನಿಧನರಾಗಿದ್ದಾರೆ. ಮೃತ ಮಲ್ಲಿಕಾರ್ಜುನಪ್ಪ ಪತ್ನಿ, ಓರ್ವ ಪುತ್ರ, ಪುತ್ರಿ ಹಾಗೂ ಅಪಾರಬಂಧುಬಳಗವನ್ನು ಅಗಲಿದ್ದಾನೆ.

### ಕಾಟಪ್ಪನಹಟ್ಟಿ ವಿನಯ್‌ಕುಮಾರ್ ಜಿಲ್ಲಾಸ್ಪತ್ರೆಯಲ್ಲಿ ಸಾವು.

» **ಚಳ್ಳಕೆರೆ**



ನಗರದ ಕಾಟಪ್ಪನಹಟ್ಟಿ ನಿವಾಸಿ ವಿನಯ್‌ಕುಮಾರ್(36) ಹೃದಯಾಘಾತವಾದ ಹಿನ್ನೆಲೆಯಲ್ಲಿ ಚಿತ್ರದುರ್ಗದ ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ಬೆಳಗ್ಗೆ ನಿಧನರಾಗಿದ್ದಾರೆ. ಅವಿವಾಹಿತರಾಗಿದ್ದ ವಿನಯ್‌ಕುಮಾರ್ ತಂದೆ ಬಟಾಣಿಬೋರಯ್ಯ, ತಾಯಿ ಸರಸ್ವತಮ್ಮ ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾನೆ.

### ಜೆಡಿಎಸ್ ಅಧಿಕಾರದತ್ತ ದಾಪುಗಾಲಿಡಲು ಕಾರ್ಯಕರ್ತರ ಸಹಕಾರ ಅತ್ಯಗತ್ಯ: ಪಿ.ತಿಪ್ಪೇಸ್ವಾಮಿ



» **ಚಳ್ಳಕೆರೆ**

ಜಾತ್ಯಾತೀತ ಜನತಾದಳ ದೇಶದಲ್ಲೇ ಅತ್ಯಂತ ಪ್ರಬಲ ಪ್ರಾದೇಶಿಕ ಪಕ್ಷವಾಗಿ ಹೊರಹೊಮ್ಮಿದೆ. ಇತ್ತೀಚೆಗೆ ವರ್ಷಗಳಲ್ಲಿ ಜಾತ್ಯಾತೀತ ಜನತಾದಳದ ಜನಪ್ರಿಯತೆ ರಾಷ್ಟ್ರೀಯ ಪಕ್ಷದ ನಾಯಕರಿಗೂ ಸವಾಲಾಗಿ ಪರಿಣಮಿಸಿದೆ. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಶ್ರಮವಹಿಸಿ ಚುನಾವಣಾ ಸಂದರ್ಭದಲ್ಲಿ ಕಾರ್ಯನಿರ್ವಹಿಸಿದೆ ಗೆಲುವು ನಮಗೆ ಸುಲಭವಾಗಿ ಒಲಿಯುತ್ತದೆ ಎಂದು ಜೆಡಿಎಸ್ ತಾಲ್ಲೂಕು ಘಟಕದ ನೂತನ ಅಧ್ಯಕ್ಷ ಪಿ.ತಿಪ್ಪೇಸ್ವಾಮಿ ತಿಳಿಸಿದರು. ಅವರು, ಪ್ರವಾಸಿಮಂದಿರದಲ್ಲಿ ಪಕ್ಷದ ಸಂಘಟನಾತ್ಮಕ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಇದೇ ಸಂದರ್ಭದಲ್ಲಿ ಪಕ್ಷದ ತಾಲ್ಲೂಕು ಘಟಕದ ನೂತನ ಅಧ್ಯಕ್ಷರಾಗಿ ಪಿ.ತಿಪ್ಪೇಸ್ವಾಮಿಯವರನ್ನು ಪಕ್ಷದ ಮುಖಂಡರು, ಕಾರ್ಯಕರ್ತರ ಒಕ್ಕೊರಲಿನ ಅಭಿಪ್ರಾಯದಂತೆ ಅಧ್ಯಕ್ಷರಾಗಿ ಅವಿರೋಧವಾಗಿ ಮರು ಆಯ್ಕೆ ಮಾಡಲಾಯಿತು. ಕಾರ್ಯಕರ್ತರು,ಮುಖಂಡರ ಪ್ರೀತಿ, ವಿಶ್ವಾಸ, ಗೌರವಕಂಡು ನನಗೆ ಹೆಚ್ಚು ಸಂತೋಷವಾಗಿದೆ ಎಂದರು.

## ಬರ ನಿರ್ವಹಣೆ ಕುರಿತು ನಡೆದ ಜಿಲ್ಲಾ ವಿಪತ್ತು ನಿರ್ವಹಣೆ ಪ್ರಾಧಿಕಾರದ ಸಭೆ

# ಟ್ಯಾಂಕರ್ ನೀರಿನ ಗುಣಮಟ್ಟ ಪರೀಕ್ಷಿಸಿಯೇ ಜನರಿಗೆ ಪೂರೈಸಿ– ಜಿಲ್ಲಾಧಿಕಾರಿ ಟಿ. ವೆಂಕಟೇಶ್

» **ಚಿತ್ರದುರ್ಗ**

ನೀರಿನ ತೀವ್ರ ಸಮಸ್ಯೆ ಕಂಡುಬರುವ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಪೂರೈಸಲಾಗುವ ನೀರಿನ ಗುಣಮಟ್ಟವನ್ನು ಪರೀಕ್ಷಿಸಿದ ಬಳಿಕವೇ, ಜನರಿಗೆ ನೀರು ಸರಬರಾಜು ಮಾಡಬೇಕು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಮುಖ್ಯಮಂತ್ರಿಗಳೊಂದಿಗಿನ ವಿಡಿಯೋ ಸಂವಾದದ ಬಳಿಕ, ಅಧಿಕಾರಿಗಳೊಂದಿಗೆ ನಡೆಸಿದ ಬರ ನಿರ್ವಹಣೆ ಕುರಿತು ನಡೆದ ಜಿಲ್ಲಾ ವಿಪತ್ತು ನಿರ್ವಹಣೆ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಖಾಸಗಿ ಕೊಳವೆ ಬಾವಿಗಳು, ಟ್ಯಾಂಕರ್ ಮೂಲಕ ನೀರು ಪೂರೈಕೆ ಸಂದರ್ಭದಲ್ಲಿ ನೀರಿನ ಗುಣಮಟ್ಟದ ಬಗ್ಗೆ ಕಡ್ಡಾಯವಾಗಿ ಪರಿಶೀಲನೆ ಮಾಡುವ ವ್ಯವಸ್ಥೆ ಇರಬೇಕು. ನೀರಿನ ಮೂಲ ಹಾಗೂ ವಿತರಣಾ ಸ್ಥಳದಲ್ಲಿ ನೀರಿನ ಮಾಲಿನ್ಯತಾ ಪರೀಕ್ಷೆಯನ್ನು ನಿಯಮಿತವಾಗಿ ನಡೆಸಬೇಕು. ಪೂರೈಕೆ ಮಾಡುತ್ತಿರುವ ನೀರು ಮಲೀನತೆಯಿಂದ ಕೂಡಿದೆ ಎಂದು ಕಂಡು ಬಂದಲ್ಲಿ ಕೂಡಲೇ ನೀರಿನ ಪೂರೈಕೆಯನ್ನು ನಿಲ್ಲಿಸಿ, ಪರ್ಯಾಯ ಮೂಲದಿಂದ ವ್ಯವಸ್ಥೆ ಕಲ್ಪಿಸಬೇಕು. ಮಾಲಿನ್ಯತಾ ಪರೀಕ್ಷೆಯ ವಿವರಗಳನ್ನು ಕಾಲಕಾಲಕ್ಕೆ ಪರಿಶೀಲಿಸಿ ವಿಶ್ಲೇಷಿಸಿ ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.

ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ರವರು,ಕಾರ್ಯನಿರ್ವಾಹಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಸಹಾಯಕ ಕಾರ್ಯಪಾಲಕ ಅಭಿಯಂತರರು ಜಂಟಿಯಾಗಿ ಕುಡಿಯುವ ನೀರಿನ ಸಮಸ್ಯೆ ಕಂಡು ಬರುವಂತಹ ಗ್ರಾಮಗಳಿಗೆ ಕಡ್ಡಾಯವಾಗಿ ಭೇಟಿ ನೀಡಿ ವಸ್ತು ಸ್ಥಿತಿ ಮಾಹಿತಿಯನ್ನು ಸಂಗ್ರಹಿಸಿ ನಿಖರವಾದ ಅಂಕಿ ಅಂಶಗಳನ್ನು ಸಲ್ಲಿಸಬೇಕು. ಬರ ಪರಿಹಾರ ಕಾರ್ಯಗಳ ವೆಚ್ಚಗಳನ್ನು ಪ್ರತಿ ವಾರಾಂತ್ಯಕ್ಕೆ ಭರಿಸಬೇಕೆಂದು ಸರ್ಕಾರದ ನಿರ್ದೇಶನವಿರುವುದರಿಂದ, ಬರಪರಿಹಾರ ಕಾರ್ಯಗಳವೆಚ್ಚದಬಗ್ಗೆನಿಯಮಾನುಸಾರ ಪರಿಶೀಲಿಸಿ ಬಿಲ್‌ಗಳನ್ನು ಪಾವತಿಸಲು ಕ್ರಮವಹಿಸಬೇಕು. ಯಾವುದೇ ಕಾರಣಕ್ಕೂ 15 ದಿನಗಳಿಗಿಂತ ಮೇಲ್ಪಟ್ಟ ಬಿಲ್‌ಗಳು ಬಾಕಿ ಇರಬಾರದು. ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡು ಬರುವಂತಹ ಗ್ರಾಮಗಳನ್ನು ಈಗಾಗಲೆ ಗುರುತಿಸಲಾಗಿದ್ದು, ಇಂತಹ ಗ್ರಾಮಗಳಲ್ಲಿ ಪರ್ಯಾಯವಾಗಿ ಇರುವಂತಹ ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಿ, ಸಂಬಂಧಪಟ್ಟವರೊಂದಿಗೆ ಕರಾರು ಮಾಡಿಕೊಳ್ಳಬೇಕು. ಅಗತ್ಯವೆಂದು ಕಂಡು ಬಂದಲ್ಲಿ ಖಾಸಗಿ ಕೊಳವೆ ಬಾವಿಯಿಂದ ಕುಡಿಯುವ ನೀರಿನ ಸಂಪರ್ಕಕ್ಕೆ ಹೆಚ್ಚುವರಿ ಪೈಪ್ ಲೈನ್ ಅಳವಡಿಸಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿ, ವೆಚ್ಚವನ್ನು ಎಸ್‌ಡಿಆರ್‌ಎಫ್ ಅಡಿ ನಿಯಮಾನುಸಾರ ಭರಿಸಬೇಕು. ಟ್ಯಾಂಕರ್ ಮೂಲಕ ನೀರು ಪೂರೈಕೆ ಅಂತಿಮ ಆಯ್ಕೆಯಾಗಿದ್ದು, ತಾಲ್ಲೂಕು ಮಟ್ಟದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಬಗ್ಗೆ ಅಲ್ಪಾವಧಿ ಟೆಂಡರ್ ಪ್ರಕ್ರಿಯೆ ಕೈಗೊಂಡು ದರವನ್ನು ಅಂತಿಮಗೊಳಿಸಿ, ಅಗತ್ಯ ಸಂದರ್ಭದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸಲು ಕ್ರಮವಹಿಸಬೇಕು.

ಟ್ಯಾಂಕರ್ ಮೂಲಕ ನೀರು ಪೂರೈಕೆ ವಿವರಗಳನ್ನು ಸರ್ಕಾರವು ಅಭಿವೃದ್ಧಿಪಡಿಸಿರುವ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಬೇಕು. ಅಂತಹ ಪೂರೈಕೆ ವೆಚ್ಚಗಳನ್ನು ಮಾತ್ರ ನಿಯಮಾನುಸಾರ ಎಸ್‌ಡಿಆರ್‌ಎಫ್ ಅಡಿ ಭರಿಸಬೇಕು ಎಂದರು.

**ತಾಲ್ಲೂಕು ಮಟ್ಟದಲ್ಲಿ ಸಹಾಯವಾಣಿ ಪ್ರಾರಂಭಿಸಿ** : ತಾಲ್ಲೂಕು ವ್ಯಾಪ್ತಿಯಲ್ಲಿ ಕುಡಿಯುವ ನೀರು, ಜಾನುವಾರುಗಳ ಮೇವು ಪೂರೈಕೆ ಸೇರಿದಂತೆ ಬರ ಪರಿಹಾರ ಕಾರ್ಯಗಳ ಬಗ್ಗೆ ನಿಯಮಿತವಾಗಿ ಪರಿಶೀಲಿಸಲು, ಪ್ರತಿವಾರ ಕಡ್ಡಾಯವಾಗಿ ತಾಲ್ಲೂಕು ಕಾರ್ಯಪಡೆ ಸಭೆಗಳನ್ನು ನಡೆಸಿ, ಅಗತ್ಯ ನಿರ್ಣಯಗಳನ್ನು ಕೈಗೊಂಡು ನಡವಳಿಗಳನ್ನು ತಪ್ಪದೇ ಸಲ್ಲಿಸಬೇಕು. ತಾಲ್ಲೂಕು ವ್ಯಾಪ್ತಿಯಲ್ಲಿ ಬರಪರಿಹಾರ ಕಾರ್ಯಗಳ ಸಮರ್ಪಕ ಅನುಷ್ಠಾನಕ್ಕಾಗಿ 24*7 ಮಾದರಿಯಲ್ಲಿ ಸಹಾಯವಾಣಿಯನ್ನು ಪ್ರಾರಂಭಿಸಿ, ಅಗತ್ಯ ಸಿಬ್ಬಂದಿಗಳನ್ನು ನಿಯೋಜಿಸಿ ಸಲ್ಲಿಕೆಯಾಗುವಂತಹ ದೂರುಗಳು/ಕುಂದು ಕೊರತೆಗಳ ಬಗ್ಗೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳಬೇಕು. ಆಯಾ ತಾಲ್ಲೂಕು ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆಗೆ ಇರುವಂತಹ ಕೊಳವೆ ಬಾವಿಗಳು, ಇದರಲ್ಲಿ ಎಷ್ಟು ಕೊಳವೆ ಬಾವಿಗಳು ಕಾರ್ಯ ನಿರ್ವಹಿಸುತ್ತಿವೆ, ಎಷ್ಟು ಕೊಳವೆ ಬಾವಿಗಳಲ್ಲಿ ಇಳುವರಿ ಕಡಿಮೆಯಾಗಿದೆ ಎಂಬ ಬಗ್ಗೆ ತಾಲ್ಲೂಕು ಕಾರ್ಯಪಡೆ ಸಭೆಗಳಲ್ಲಿ ಚರ್ಚಿಸಿ ವಿಶ್ಲೇಷಿಸಬೇಕು. ಅನಿವಾರ್ಯ ಸಂದರ್ಭ ಇದ್ದಲ್ಲಿ ಮಾತ್ರ ಹೊಸಕೊಳವೆಬಾವಿಗಳನ್ನುಕೊರೆಯಿಸಲು ಕ್ರಿಯಾ ಯೋಜನೆ ಸಿದ್ಧಪಡಿಸಿ, ಕೊಳವೆ ಬಾವಿ ಕೊರೆಸುವ ಮುನ್ನ ಹಿರಿಯ ಭೂ ವಿಜ್ಞಾನಿಗಳಿಂದ ಇಳುವರಿಯ ಬಗ್ಗೆ ಪರಿಶೀಲನಾ ವರದಿಯನ್ನು ಪಡೆದ ನಂತರವೇ ಅಗತ್ಯ ಕ್ರಮವಹಿಸಬೇಕು. ನೀರು ಪೂರೈಕೆಯಾಗುವಂತಹ ಟ್ಯಾಂಕರ್‌ಗಳ ಕಂಟೈನರ್‌ಗಳನ್ನು, ನೀರು ಸರಬರಾಜು ಓವರ್ ಹೆಡ್ ಟ್ಯಾಂಕ್‌ಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಿ, ನೀರು ಪೂರೈಕೆ ಮಾಡುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಅಗತ್ಯ ಮತ್ತು ಅವಶ್ಯಕತೆ ಎಂದು ಕಂಡು ಬಂದಲ್ಲಿ ತಾಲ್ಲೂಕು ಕಾರ್ಯಪಡೆಗಳಲ್ಲಿ ಚರ್ಚಿಸಿ, ಸೂಕ್ತ ನಿರ್ಣಯ ಕೈಗೊಂಡು ಅಗತ್ಯ ವ್ಯವಸ್ಥೆಯೊಂದಿಗೆ ಮೇವು ನಿಧಿ/ಗೋಶಾಲೆಗಳನ್ನು ಪ್ರಾರಂಭಿಸಲು ಕ್ರಮವಹಿಸಬೇಕು, ಗೋಶಾಲೆಗಳಿಗೆ ಪೂರೈಕೆಯಾಗುವ ಮೇವಿನ ಗುಣಮಟ್ಟದ ಬಗ್ಗೆ ಹಾಗೂ ಯಾವ ಸ್ಥಳದಿಂದ ಪೂರೈಕೆಯಾಗುತ್ತಿದೆ ಎಂಬ ಬಗ್ಗೆ ನಿಯಮಿತವಾಗಿ ಪರಿಶೀಲಿಸಬೇಕು ಎಂದರು.

ತಾಲ್ಲೂಕುಮಟ್ಟದಲ್ಲಿಎಲ್ಲಾಅಧಿಕಾರಿಗಳು ಪರಸ್ಪರ ಸಮನ್ವಯದೊಂದಿಗೆ ಕುಡಿಯುವ ನೀರಿನ ವ್ಯವಸ್ಥೆ, ಜಾನುವಾರುಗಳಿಗೆ ಮೇವಿನ ವ್ಯವಸ್ಥೆ ಸೇರಿದಂತೆ ಬರ ಪರಿಹಾರ ಕಾರ್ಯಗಳನ್ನು ಯಾವುದೇ ಲೋಪದೋಷಗಳಿಗೆ ಎಡೆಮಾಡಿಕೊಡದೆ ಸಮರ್ಪಕವಾಗಿ ಅನುಷ್ಠಾನಗೊಳಿಸುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಸಭೆಯಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ. ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಕಾರ್ತಿಕ್, ಜಂಟಿಕೃಷಿ ನಿರ್ದೇಶಕ ಮಂಜುನಾಥ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕುಗಳ ತಹಸಿಲ್ದಾರರು, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ವಿಶ್ವ ಶ್ರವಣ ದಿನ ಕಾರ್ಯಕ್ರಮದಲ್ಲಿ ಡಿಹೆಚ್‌ಓ ಡಾ.ಜಿ.ಪಿ.ರೇಣುಪ್ರಸಾದ್

# ಶ್ರವಣದೋಷ ತಡೆಗಟ್ಟುವಲ್ಲಿ ಸಹಕಾರ ಅಗತ್ಯ

» **ಚಿತ್ರದುರ್ಗ**

ಕಿವುಡುತನ ಮತ್ತು ಶ್ರವಣದೋಷ ತಡೆಗಟ್ಟುವಲ್ಲಿ ಎಲ್ಲಾ ಹಂತದ ಸಹಕಾರ ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು.

ನಗರದ ಜಿಲ್ಲಾ ಆಸ್ಪತ್ರೆಯ ಬಿ.ಸಿ.ರಾಯ್ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಆರೋಗ್ಯ ಇಲಾಖೆ, ಜಿಲ್ಲಾ ಆಸ್ಪತ್ರೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಶ್ರವಣ ದಿನ–2024 ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಿವುಡುತನ ಮತ್ತು ಶ್ರವಣದೋಷ ತಡೆಗಟ್ಟುವುದು ಮತ್ತು ಪ್ರಪಂಚದಾದ್ಯಂತ ಕಿವಿ ಮತ್ತು ಶ್ರವಣ ಆರೈಕೆ ಉತ್ತೇಜಿಸುವುದು ಹೇಗೆ ಎಂಬುದರ ಕುರಿತು ಜಾಗೃತಿ ಮೂಡಿಸಲು ಪ್ರತಿ ವರ್ಷ ಮಾರ್ಚ್ 3ರಂದು ವಿಶ್ವ ಶ್ರವಣ ದಿನ ಆಚರಿಸಲಾಗುತ್ತದೆ ಎಂದರು.

ವಿಶ್ವ ಶ್ರವಣ ದಿದ ಈ ಬಾರಿಯ ಘೋಷಣೆ “ಬದಲಾಗುತ್ತಿರುವ ಮನಸ್ಥಿತಿಗಳು ಎಲ್ಲರಿಗೂ ಕಿವಿ ಮತ್ತು ಶ್ರವಣದ ಆರೈಕೆ ಸೇವೆಗಳನ್ನು ಸಾಫಲ್ಯಗೊಳಿಸೋಣ! ಎಂಬುದಾಗಿದೆ.



ಜಿಲ್ಲೆಯಲ್ಲಿ ಇದುವರೆಗೆ 14 ಮಕ್ಕಳಿಗೆ ಕಾಕ್ಲಿಯರ್ ಇಂಪ್ಲಾಂಟೇಷನ್ ದುಬಾರಿ ಶಸ್ತ್ರಚಿಕಿತ್ಸೆ ವೆಚ್ಚವನ್ನು ಸರ್ಕಾರವೇ ಭರಿಸಿ ಮಕ್ಕಳ ಶ್ರವಣದೋಷ ಸಮಸ್ಯೆ ಪರಿಹರಿಸಿದೆ ಎಂದರು.

ಜಿಲ್ಲಾ ಆಸ್ಪತ್ರೆಯ ಕಣ್ಣು ಕಿವಿ ಮೂಗು ತಜ್ಞ ಡಾ.ಮಲ್ಲಿಕಾರ್ಜುನ್ ಮಾತನಾಡಿ, ಅನೇಕರಲ್ಲಿ ಶ್ರವಣ ದೋಷ ಸಮಸ್ಯೆಯನ್ನು ಕಾಣುತ್ತಿದ್ದೇವೆ. ಈ ಸಮಸ್ಯೆಯನ್ನು ಆರಂಭಿಕ ಹಂತದಲ್ಲಿ ಗುರುತಿಸುವುದು ಅಗತ್ಯ, ಏಕೆಂದರೆ ಇದು ಮಾತು ಮತ್ತು ಭಾಷೆ ಬೆಳವಣಿಗೆಯನ್ನು ಅವಲಂಬಿಸಿರುತ್ತದೆ. ಈ ಹಿನ್ನೆಲೆಯಲ್ಲಿ ನಮ್ಮ ಕಿವಿ ಆರೋಗ್ಯದ ಬಗ್ಗೆ ಹೇಗೆ ಕಾಳಜಿ ತೆಗೆದುಕೊಳ್ಳಬೇಕು? ಜೊತೆಗೆ ಸಮಸ್ಯೆಗಳು ಕಂಡುಬಂದಾಗ ಯಾವ ರೀತಿ ಎಚ್ಚರಿಕೆಗಳನ್ನು ತೆಗೆದುಕೊಳ್ಳಬೇಕು ಎಂಬ ಮಾಹಿತಿಯನ್ನು ತಜ್ಞರು ಹಂಚಿಕೊಂಡಿದ್ದಾರೆ. ವಿವಿಧ ಕಾರಣಗಳಿಂದ ಶ್ರವಣ ದೋಷ ಕಾಣಿಸಿಕೊಳ್ಳುತ್ತದೆ. ಅವುಗಳಲ್ಲಿ ಕೆಲವು ಘಟನೆಗಳು ಜೆನೆಟಿಕ್ಸ್‌ನಿಂದ, ಕೆಲವು ಸಂದರ್ಭಗಳಲ್ಲಿ ಸೋಂಕು, ಗಾಯ, ಅಧಿಕ ರಕ್ತದೊತ್ತಡ, ಮಧುಮೇಹದಂತಹ ಸಮಸ್ಯೆಗಳು, ಒಟೋಟಾಕ್ಸಿಕ್ ಔಷಧಿಗಳ ನಿರಂತರ ಬಳಕೆ ಮತ್ತು ಭಾರೀ ಪ್ರಮಾಣದ ಶಬ್ದವನ್ನು ಆಲಿಸುವುದರಿಂದಲೂ ಶ್ರವಣ ದೋಷ ಕಾಣಿಸಿಕೊಳ್ಳುತ್ತದೆ ಎಂದರು.

## ಸರ್ಕಾರದಿಂದ ಕನ್ನಡ ಭಾಷೆಗೆ ಹೆಚ್ಚಿನ ಒತ್ತು, ಶೇ 60 ರಷ್ಟು ಬಳಕೆ ಕಡ್ಡಾಯ

» **ದಾವಣಗೆರೆ**

ಕನ್ನಡ ಬಳಕೆಗೆ ಕಾಯಿದೆಯನ್ನು ಮಾಡುವ ಮೂಲಕ ರಾಜ್ಯದಲ್ಲಿ ಕನ್ನಡ ಬೆಳಗುವ ಕೆಲಸವನ್ನು ಸರ್ಕಾರ ಮಾಡಿದೆ ಎಂದು ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ತಿಳಿಸಿದರು. ಅವರು ಮಂಗಳವಾರ ದಾವಣಗೆರೆ ತಾ; ಹೆಬ್ಬಾಳು ಗ್ರಾಮದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನಿಂದ ಏರ್ಪಡಿಸಲಾದ 10 ನೇ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟನಾ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸದನದಲ್ಲಿ ಕನ್ನಡ ಭಾಷೆಯ ಅನುಷ್ಟಾನಕ್ಕೆ ಕಾಯಿದೆ ಮಂಡಿಸಿ ಶೇ 60 ರಷ್ಟು ಕನ್ನಡ ಬಳಕೆ ಕಡ್ಡಾಯ ಮಾಡಲಾಗಿದೆ. ಅದೇ ರೀತಿ ರಾಜ್ಯದಲ್ಲಿನ ಉದ್ದಿಮೆಗಳಲ್ಲಿ ರಾಜ್ಯದ ಜನರಿಗೆ ಶೇ 80 ರಷ್ಟು ಉದ್ಯೋಗ ನೀಡುವಂತಹ ಕಾಯಿದೆಯು ಅನುಷ್ಟಾನವಾಗಬೇಕೆಂದು ಅಭಿಪ್ರಾಯಪಟ್ಟರು. ಇಲ್ಲಿನ ರೈತರು ಬೆಳೆದ ಬೆಳೆಗಳಿಗೆ ಸೂಕ್ತವಾದ ಬೆಂಬಲ ಬೆಲೆ ಸಿಗಬೇಕು, ಇದರಿಂದ ರೈತ ಸಶಕ್ತನಾಗಿ ಬದುಕಲು ಸಾಧ್ಯವಾಗಲಿದೆ. ದಾವಣಗೆರೆ ರಾಜ್ಯದ ಮಧ್ಯಭಾಗ ದಲ್ಲಿದ್ದು ಇಲ್ಲಿ ಯಾವುದೇ ಇತರೆ ರಾಜ್ಯಗಳ ಭಾಷೆಯ ಪ್ರಭಾವವಿರುವುದಿಲ್ಲ. ಇಲ್ಲಿ ಕನ್ನಡ ಮಾತನಾಡುವವರೇ ಸಿಗುತ್ತಾರೆ. ಅಕ್ಕ ಪಕ್ಕದ ಜಿಲ್ಲೆಗಳಿಗೆ ಹೋಲಿಕೆ ಮಾಡಿದರೆ ಇತರೆ ಭಾಷೆಗಳ ಪ್ರಭಾವ ಇಲ್ಲಿ ಇಲ್ಲ. ವಿಶ್ವ ಕನ್ನಡ ಸಾಹಿತ್ಯ ಸಮ್ಮೇಳನವನ್ನು ದಾವಣಗೆರೆಯಲ್ಲಿ ಆಯೋಜಿಸಬೇಕಾಗಿದ್ದು ಮುಂದಿನ ದಿನಗಳಲ್ಲಿ ಈ ಸಮ್ಮೇಳನ ದಾವಣಗೆರೆಯಲ್ಲಿನಡೆಯುವಂತಾಗಲಿ ಎಂದರು. ಸಮ್ಮೇಳನ ಅಧ್ಯಕ್ಷರಾದ ಬಿ.ಟಿ.ಜಾಹ್ನವಿ ಮಾತನಾಡಿ ಕನ್ನಡ ಭಾಷೆ ಇಂಗ್ಲೀಷ್ ವ್ಯಾಮೋಹ ದಿಂದಾಗಿ ಕಳೆಗುಂದುತ್ತಿದೆ. ವ್ಯವಹಾರಿಕವಾಗಿ ಕನ್ನಡ ಬಳಕೆ ಕಡಿಮೆ ಆಗುತ್ತಿರುವುದು. ಉದ್ಯೋಗಗಳಿಗೂ, ಇಂಗ್ಲಿಷ್ ಕಡ್ಡಾಯವೇ ಆಗಿದೆ.

## ಪ್ರಮುಖ ಸುದ್ದಿ

# ರಾಜ್ಯದಲ್ಲಿ ಅತಿ ಹೆಚ್ಚು ಕಡಿಮೆ ಮಳೆ ಬೀಳುವ ಪ್ರದೇಶ ಚಳ್ಳಕೆರೆ

» **ಪರಶುರಾಂಪುರ**

ಬಯಲು ಸೀಮೆಯಲ್ಲಿ ಅಡಿಕೆ ಬೆಳೆ ಬೆಳೆಯುವ ರೈತರಿಗೆ ಸಬ್ಸಿಡಿ, ಸಹಾಯಧನ ನೀಡಬೇಕೆಂದು ಬೆಂಗಳೂರು,ಬೆಳಗಾಂ ಅಧಿವೇಶನದಲ್ಲಿ ಗಮನ ಸೆಳದು ಹಾಗೂ ಅನೇಕ ಸಭೆಯಲ್ಲಿ ಚರ್ಚಿಸಲಾಗಿದೆ ಎಂದು ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ವ್ಯಾಪ್ತಿಯ ಚೌಳೂರು ಗೇಟ್ ಸಮೀಪದ ಅಲ್ಲಿಪೀರಿ ಮಠದಲ್ಲಿ ಮಂಗಳವಾರ ತೋಟಗಾರಿಕೆ ಇಲಾಖೆ ಚಳ್ಳಕೆರೆ,ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಅಡಿಕೆ ಸಂಶೋಧನಾ ಕೇಂದ್ರ ಶಿವಮೊಗ್ಗ,ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ ಬಬ್ಬೂರು, ಕೃಷಿ ತಂತ್ರಜ್ಞರ ಸಂಸ್ಥೆ ಚಿತ್ರದುರ್ಗ ಇವರ ಸಹಯೋಗದಲ್ಲಿ ಅಡಿಕೆ ಬೇಸಾಯ ಮತ್ತು ಇತರೆ ಬೆಳೆಗಳ ಕುರಿತು ಆಯೋಜಿಸಿದ್ದಾ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಮಾತನಾಡಿದರು.



ವೇದಾವತಿ ನದಿಗೆ ಕಳೆದ ದಿನಗಳಲ್ಲಿ ಮಳೆ ನೀರು ಜತೆ ವಾಣಿವಿಲಾಸ ಸಾಗರದಿಂದ ನೀರು ಬರುವುದರಿಂದ ಈ ಭಾಗದಲ್ಲಿ ಮೊದಲಿಗಿಂತಲೂ ಹದಿನಾರು ಸಾವಿರ ಹೆಕ್ಟೇರ್ ಅಡಿಕೆ ಬೆಳೆ ಹೆಚ್ಚಾಗಿದೆ ಇದಕ್ಕೆ ಸಂತೋಷ ಜತೆ ಆತಂಕವು ಆಗುವುದು.ರಾಜ್ಯದಲ್ಲಿ ಅತಿ ಹೆಚ್ಚು ಕಡಿಮೆ ಮಳೆ ಬೀಳುವ ಪ್ರದೇಶ ಚಳ್ಳಕೆರೆಯಾಗಿದೆ ಎಂದರು.ಪಿ.ಮಹದೇವಪುರ ಹಾಗೂ ದೊಡ್ಡಬೀರನಹಳ್ಳಿ ಬೆಸ್ಕಾಂ ಸೆಕ್ಷನ್ ಕಾಮಗಾರಿಗಳು ಟೆಂಡರ್ ಹಂತದಲ್ಲಿವೆ. ಗೋಸಿಕೆರೆ ಬಳಿ ಬ್ಯಾರೇಜ್ ಕಂ ಬ್ರಿಡ್ಜ್, ಕೋನಿಗರಹಳ್ಳಿ ಬಳಿಯ ಸೇತುವೆಯ ತಡೆಗೊಡೆ ಇಲ್ಲವೆ ಹೊಸದಾಗಿ ಬ್ಯಾರೇಜ್ ಕಂ ಬ್ರಿಡ್ಜ್ ಸೇರಿದಂತೆ ಸಾಣಿಕೆರೆ ಬಳಿ ಒಣ ಬೇಸಾಯ ಕೃಷಿ ಪದ್ಧತಿಯಲ್ಲಿ ಸಂಶೋಧನಾ ಕೇಂದ್ರ ಸ್ಥಾಪನೆ ಸೇರಿದಂತೆ ಇನ್ನಿತರೆ ಕ್ಷೇತ್ರದಲ್ಲಿ ಬದಲಾವಣೆಯ ಅಭಿವೃದ್ಧಿಯ ಕಾಮಗಾರಿಗಳ ಬಗ್ಗೆ ತಿಳಿಸಿದರು.ಅಡಿಕೆ ಸಂಶೋಧನಾ ಕೇಂದ್ರದ ಮುಖ್ಯಸ್ಥ ನಾಗರಾಜಪ್ಪ ಅಡಿವಪ್ಪರ್ ಮಾತನಾಡಿ,ಅಡಿಕೆ ಬೆಳೆ ಬೇರೆ ಬೆಳೆಗಳಿಗೆ ಹೋಲಿಕೆ ಮಾಡಿದರೆ ಶ್ರಮ ಕಡಿಮೆ ಆದರೆ ಆರ್ಥಿಕ ಮಟ್ಟ ಸುಧಾರಿಸುತ್ತದೆ.ಮಿಶ್ರ ಬೆಳೆಗಳು ಪ್ರಮುಖ ಬೆಳೆಯಿಂದ ಆಗುವ ನಷ್ಟವನ್ನು ತುಂಬುವ ಕೆಲಸ ಮಾಡುತ್ತದೆ ಎಂದರು.ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ನಿವೃತ್ತ ನಿರ್ದೇಶಕ ಡಾ.ಶ್ರೀನಿವಾಸ ರೆಡ್ಡಿ ಮಾತನಾಡಿ,ಅತಿ ಕಡಿಮೆ ಬೀಳುವ ಚಳ್ಳಕೆರೆ ತಾಲ್ಲೂಕಿನಲ್ಲಿ ಪರಶುರಾಂಪುರ ಹಾಗೂ ತಳುಕು ಹೋಬಳಿಯಲ್ಲಿ ಕಾಲಕಾಲಕ್ಕೆ ಮುಂಗಾರು, ಹಿಂಗಾರು ಮಳೆ ಇಲ್ಲದೆ ಅಂತರ್ಜಲ ನಂಬಿಕೊಂಡು ಬೆಳೆ ಬೆಳೆಯುವ ಪ್ರದೇಶದಲ್ಲಿ ಅಡಿಕೆ ಜತೆ ಮಿಶ್ರ ಬೇಸಾಯ ಕೃಷಿ ಪ್ರಮುಖವಾಗುವುದು ಎಂದರು.

ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ನಿವೃತ್ತ ಸಂಶೋಧನಾ ನಿರ್ದೇಶಕರ ಸತ್ಯನಾರಾಯಣರ ರೆಡ್ಡಿ ಮಾತನಾಡಿ, ಮಣ್ಣಿನ ಫಲವತ್ತತೆಯ ತತ್ವಿರುದ್ಧವಾಗಿ ಅಡಿಕೆ ಬೆಳೆಗಳನ್ನು ಬೆಳೆಯುವ ಬದಲು ಇತರೇ ಬೆಳೆಗಳು ಬಗ್ಗೆ ಗಮನ ನೀಡಬೇಕು ಎಂದರು.

ಅಡಿಕೆ ಸಂಶೋಧನಾ ಕೇಂದ್ರದ ಹಿರಿಯ ಸಂಶೋಧನ ಸಹಾಯಕ ಡಾ.ಸುದೀಪ್ ಮಾತನಾಡಿ, ವೈಜ್ಞಾನಿಕ ಪದ್ಧತಿಯನ್ನು ಅಳವಡಿಸಿಕೊಂಡು ಅಡಿಕೆ ಬೆಳೆ ಬೆಳೆಯುವುದರ ಜತೆ ಇತರೆ ಬೆಳೆಗಳನ್ನ ಬೆಳೆಯ ಬೇಕು ಎಂದರು. ಗ್ರಾಪಂ ಅಧ್ಯಕ್ಷೆ ಕಾವ್ಯ ವಿಜಯಕುಮಾರ್,ರೈತ ಸಂಘದವರಾದ ಕೆ.ಪಿ ಭೂತಯ್ಯ, ರೆಡ್ಡಿ ಹಳ್ಳಿ ವೀರಣ್ಣ,ಸೋಮುಗುದ್ದ ರಂಗಸ್ವಾಮಿ, ಚಿಕ್ಕಣ್ಣ,ದಯಾನಂದ ಮೂರ್ತಿ,ತೋಟಗಾರಿಕೆ ಇಲಾಖೆಯ ವಿರುಪಾಕ್ಷಪ್ಪ,ಕೃಷಿ ಅಧಿಕಾರಿ ಜೀವನ್, ಮುಖಂಡರಾದ ಚೆನ್ನಕೇಶವ,ಭೂತಲಿಂಗ ಪ್ಪ,ಜಯವೀರಚಾರಿ, ರಂಗಸ್ವಾಮಿ,ಶಿವಣ್ಣ, ದೇವರಾಜ ಸೇರಿದಂತೆ ಗ್ರಾಪಂ ಸದಸ್ಯರು, ಮುಖಂಡರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನಾಯಕನಹಟ್ಟಿ ತಿಪ್ಪೇರುದ್ರಸ್ವಾಮಿ ಹುಂಡಿಯಲ್ಲಿ 38,67,660 ಹಣ ಸಂಗ್ರಹ





» **ಚಳ್ಳಕೆರೆ**

ನಾಯಕನಹಟ್ಟಿಯ ಶ್ರೀಗುರುತಿಪ್ಪೇರುದ್ರಸ್ವಾಮಿಯ ಹುಂಡಿಹಣದ ಏಣಿಕೆ ಕಾರ್ಯ ಮಂಗಳವಾರ ದೇವಸ್ಥಾನದ ಆವರಣದಲ್ಲಿ ನಡೆದಿದ್ದು, ಪ್ರಸ್ತುತ ವರ್ಷ ಒಟ್ಟು 38,67,660 ಹಣ ಸಂಗ್ರಹವಾಗಿದ್ದು, ಇದು ಕಳೆದ ವರ್ಷಕ್ಕಿಂತ ಅಧಿಕ ಎನ್ನಲಾಗಿದೆ. ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರ ನೇತೃತ್ವದಲ್ಲಿ ಹುಂಡಿ ಏಣಿಕೆ ಕಾರ್ಯ ನಡೆದಿದ್ದು, ಮುರುಜರಾಯಿ ಅಧಿಕಾರಿ ಹಾಗೂ ತಹಶೀಲ್ದಾರ್ ರೇಹಾನ್‌ಪಾಷ ಹುಂಡಿಹಣದ ಏಣಿಕೆ ಬಗ್ಗೆ ಮಾಹಿತಿ ನೀಡಿದರು. ಸುಮಾರು ಎಂಟು ಗಂಟೆಗಳ ಕಾಲ ದೇವಸ್ಥಾನದ ಸಿಬ್ಬಂದಿ, ಬ್ಯಾಂಕ್ ಅಧಿಕಾರಿಗಳು, ಕಂದಾಯ ಇಲಾಖೆ ಅಧಿಕಾರಿಗಳು ಏಣಿಕೆ ಕಾರ್ಯದಲ್ಲಿ ಭಾಗವಹಿಸಿದ್ದರು. ಒಳಮಠದಲ್ಲಿ 32,67,065, ಹೊರಮಠದಲ್ಲಿ 600595 ಒಟ್ಟು 38,67,660 ಲಕ್ಷ ಹಣ ಸಂಗ್ರಹವಾಗಿದೆ. ಇದೇ ಸಂದರ್ಭದಲ್ಲಿ ಭಕ್ತಾಧಿಗಳು ದೇವರಿಗೆ ಕಾಣಿಕೆರೂಪದಲ್ಲಿ ವಿವಿಧ ರೂಪದ ಬೆಳ್ಳಿ ಆಭರಣಗಳನ್ನು ಸಹ ಹುಂಡಿಯಲ್ಲಿ ಹಾಕಿರುತ್ತಾರೆ. ಕಳೆದ ವರ್ಷಕ್ಕಿಂತ ಈ ಬಾರಿ ಹೆಚ್ಚಿನ ಬೆಳ್ಳಿ ಆಭರಣಗಳು ದೇವರಿಗೆ ಅರ್ಪಿತವಾಗಿವೆ.

### ದ್ವಿತೀಯ ಪಿ.ಯು.ಸಿ ಪರೀಕ್ಷೆ, 5248 ವಿದ್ಯಾರ್ಥಿಗಳು ಹಾಜರು

» **ದಾವಣಗೆರೆ**

ಮಾರ್ಚ್ 5 ರಂದು ರಂದು ದ್ವಿತೀಯ ಪಿಯುಸಿಯ ರಾಜ್ಯಶಾಸ್ತ್ರ ಮತ್ತು ಸಂಖ್ಯಾಶಾಸ್ತ್ರ ವಿಷಯದ ಪರೀಕ್ಷೆ ನಡೆದಿದ್ದು 5248 ವಿದ್ಯಾರ್ಥಿಗಳು ಹಾಜರಾಗಿದ್ದರು. ರಾಜ್ಯಶಾಸ್ತ್ರ ವಿಷಯದಲ್ಲಿ 4722 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದು 4133 ವಿದ್ಯಾರ್ಥಿಗಳು ಹಾಜರಾಗಿ 589 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಅಂಕಿ ಅಂಶಗಳ ವಿಷಯದಲ್ಲಿ 1155 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದು 1115 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ 40 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಪದವಿಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕರಿಸಿದ್ದಪ್ಪ ತಿಳಿಸಿದ್ದಾರೆ.

### ಬಾಡಿಗೆ ಕಟ್ಟಡ ಬೇಕಾಗಿದೆ.

» **ದಾವಣಗೆರೆ**

ಮಿಷನ್ ಶಕ್ತಿ ಯೋಜನೆಯಡಿ ಸ್ವಾಧಾರ ಗೃಹ ಶಕ್ತಿ ಸಾಧನ ಕೇಂದ್ರವನ್ನು ಪ್ರಾರಂಭಿಸಲು ಕಟ್ಟಡವನ್ನು ಭಾಡಿಗೆ ಆಧಾರದ ಮೇಲೆ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. 50 ಫಲಾನುಭವಿಗಳ ಆಶ್ರಯಕ್ಕಾಗಿ 1000 ಚ.ಸೆ.ಮೀ ವಿಸ್ತೀರ್ಣದ ಸುವ್ಯವಸ್ಥಿತ ಕಟ್ಟಡವನ್ನು ಬಾಡಿಗೆ ಆಧಾರದ ಮೇಲೆ ಪಡೆಯುವ ಹಿನ್ನಲೆಯಲ್ಲಿ ಆಸಕ್ತ ಕಟ್ಟಡದ ಮಾಲೀಕರು ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ದಾವಣಗೆರೆ ಇವರು ನೀಡಿರುವ ವಿಸ್ತೀರ್ಣದ ದೃಡೀಕರಣ ಪತ್ರ ಮತ್ತು ಕಟ್ಟಡದ ಛಾಯಾಚಿತ್ರದೊಂದಿಗೆ ಮಾರ್ಚ್ 20 ರೊಳಗೆ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಚೇರಿ, ಸರ್ಕಾರಿ ಬಾಲಕರ ಮಂದಿರ ಆವರಣ, ಎಂ.ಸಿ.ಸಿ ಬಿ ಬ್ಲಾಕ್ ಕುವೆಂಪು ನಗರ ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ಉಪನಿರ್ದೇಶಕರಾದ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ಲೋಕಾದಾಲತ್ ಮಾ.16 ಕ್ಕೆ ಮುಂದೂಡಿಕೆ

» **ದಾವಣಗೆರೆ**

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಮಾರ್ಚ್ 9 ರಂದು ಆಯೋಜಿಸಲಾಗಿದ್ದ ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಮಾರ್ಚ್ 16 ಕ್ಕೆ ಮುಂದೂಡಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರಣ್ಣವರ ತಿಳಿಸಿದ್ದಾರೆ.

# ಜಿಲ್ಲೆಯ ಪಂಚಮಿತ್ರ ಪೋರ್ಟಲ್ ಲೋಕಾರ್ಪಣೆ

## ಗ್ರಾಮ ಪಂಚಾಯತಿಗಳ ಹಲವು ಸೇವೆ ಹಾಗೂ ಮಾಹಿತಿ ಪಂಚಮಿತ್ರ ಪೋರ್ಟಲ್‌ನಲ್ಲಿ ಲಭ್ಯ: ಜಿಲ್ಲಾಧಿಕಾರಿ ವೆಂಕಟೇಶ್

» **ಚಿತ್ರದುರ್ಗ**

ಗ್ರಾಮ ಪಂಚಾಯತಿಗಳ ವಿವಿಧ ಮಾಹಿತಿ ಮತ್ತು ಸೇವೆಗಳು ಒಂದೇ ವೇದಿಕೆಯಲ್ಲಿ ಲಭಿಸುವಂತ ಪಂಚಮಿತ್ರ ನೂತನ ವೆಬ್ ಪೋರ್ಟಲ್ ಅನ್ನು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಮಂಗಳವಾರ ಲೋಕಾರ್ಪಣೆಗೊಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಪಂಚಮಿತ್ರ ನೂತನ ಪೋರ್ಟಲ್ ಅನ್ನು ಲೋಕಾರ್ಪಣೆಗೊಳಿಸಿದ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು, ಸಾರ್ವಜನಿಕರು ತಮಗೆ ಅವಶ್ಯವಿರುವ ಗ್ರಾಮ ಪಂಚಾಯತಿಗಳ ವಿವಿಧ ಮಾಹಿತಿ ಮತ್ತು ವಿವರಗಳನ್ನು ಪಡೆಯಲು ಮತ್ತು ಗ್ರಾಮ ಪಂಚಾಯತಿಗಳ ಸೇವೆಗಳಿಗೆ ಅರ್ಜಿ ಸಲ್ಲಿಸಲು ಪಂಚಮಿತ್ರ ನೂತನ ಪೋರ್ಟಲ್ ಅತ್ಯಂತ ಜನಸ್ನೇಹಿಯಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಅವರು ಮಾತನಾಡಿ, ಗ್ರಾಮೀಣ ಭಾಗದವರು ಗ್ರಾಮ ಪಂಚಾಯಿತಿಗೆ ಸಂಬಂಧಿಸಿದ ಹಲವು ಮಾಹಿತಿ ಮತ್ತು ವಿವರ ಪಡೆಯುವ ಸಲುವಾಗಿ ಹಲವಾರು ವೆಬ್ ಸೈಟ್ ಮತ್ತು ಪೋರ್ಟಲ್ ಗಳಲ್ಲಿ ಭೇಟಿ ನೀಡಬೇಕಾಗಿತ್ತು. ಅಲ್ಲದೇ, ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಎಲ್ಲಾ ಬಗೆಯ ಕುಂದುಕೊರತೆಗಳನ್ನು ದಾಖಲಿಸಿ, ನಿವಾರಣೆ ಪಡೆಯಲು ಯಾವುದೇ ನಿರ್ದಿಷ್ಟವಾದ ವೆಬ್ ಸೈಟ್ ಅಥವಾ ಪೋರ್ಟಲ್ ಗಳು ಇರುವುದಿಲ್ಲ. ಹೀಗಾಗಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಬರುವ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ವಿವಿಧ ಮಾಹಿತಿ ಮತ್ತು ವಿವರಗಳನ್ನು ಪಡೆಯಲು, ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಸೇವೆಗಳಿಗೆ ಆನ್-ಲೈನ್ ನಲ್ಲಿ ಅರ್ಜಿ ಸಲ್ಲಿಸಲು, ಸಲ್ಲಿಸಿದ ಅರ್ಜಿಗಳ ಸ್ಥಿತಿಗತಿಯನ್ನು ಪರಿಶೀಲಿಸಲು ಹಾಗೂ ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಕುಂದುಕೊರತೆಗಳನ್ನು ದಾಖಲಿಸಲು, "ಪಂಚಮಿತ್ರ"ಎಂಬ ಒಂದೇ ವೇದಿಕೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಯಿಂದ ಅಭಿವೃದ್ಧಿ ಪಡಿಸಿ, ಅನುಷ್ಠಾನಗೊಳಿಸಲಾಗಿದೆ. "ಪಂಚಮಿತ್ರ" ಪೋರ್ಟಲ್ ಮೂಲಕ ಈ ಕೆಳಗಿನ ಗ್ರಾಮ ಪಂಚಾಯತಿಗಳ ಮಾಹಿತಿ ಮತ್ತು ವಿವರಗಳನ್ನು ಪಡೆಯಬಹುದಾಗಿದೆ. ಸಾರ್ವಜನಿಕರು ಪಂಚಮಿತ್ರ ಪೋರ್ಟಲ್‌ನ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.



**ಪಂಚಮಿತ್ರ ಪೋರ್ಟಲ್‌ನಲ್ಲಿ ಏನೇನು ಲಭ್ಯ** : ಚುನಾಯಿತ ಪ್ರತಿನಿಧಿಗಳ ವಿವರಗಳು, ಸಿಬ್ಬಂದಿಗಳ ವಿವರಗಳು, ಪೂರ್ಣಗೊಂಡ ಗ್ರಾಮ ಪಂಚಾಯತ್ ಸಭೆಗಳ ನಡಾವಳಿಗಳು, ಗ್ರಾಮ ಪಂಚಾಯತಿಗಳ ಮುಂಬರುವ ಸಭೆಗಳ ಮಾಹಿತಿ, ಆದಾಯ ಸಂಗ್ರಹ ವಿವರಗಳು, ಸೇವೆಗಳ ವಿವರಗಳು, ಸ್ವ ಸಹಾಯ ಗುಂಪಿನ ವಿವರಗಳು, ಗ್ರಾಮ ಪಂಚಾಯತ್ಗಳ ಕಾರ್ಯಕ್ರಮಗಳು ಮತ್ತು ಉಪಕ್ರಮಗಳು ಸೇರಿದಂತೆ ವಿವಿಧ ಮಾಹಿತಿಗಳು ಲಭ್ಯವಿದೆ. ಅಲ್ಲದೆ ಪೋರ್ಟಲ್ ಮೂಲಕ ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಈ ಕೆಳಗಿನ ಸೇವೆಗಳಿಗೆ ಆನ್-ಲೈನ್ ನಲ್ಲಿ ಅರ್ಜಿ ಸಲ್ಲಿಸಿ, ಸೇವೆಗಳನ್ನು ಪಡೆಯಬಹುದಾಗಿದೆ. ಅರ್ಜಿಗಳ ಸ್ಥಿತಿಗತಿಯನ್ನು ಸಹ ಪರಿಶೀಲಿಸಬಹುದಾಗಿದೆ.

ಲಭ್ಯವಿರುವ ಸೇವೆಗಳು : ಕಟ್ಟಡ ನಿರ್ಮಾಣ ಲೈಸೆನ್ಸ್, ಹೊಸ ನೀರು ಸರಬರಾಜು ಸಂಪರ್ಕ, ನೀರು ಸರಬರಾಜಿನ ಸಂಪರ್ಕ ಕಡಿತ, ಕುಡಿಯುವ ನೀರಿನ ನಿರ್ವಹಣೆ, ಬೀದಿ ದೀಪದ ನಿರ್ವಹಣೆ, ಗ್ರಾಮ ನೈರ್ಮಲ್ಯದ ನಿರ್ವಹಣೆ, ವ್ಯಾಪಾರ ಪರವಾನಗಿ, ಸ್ವಾಧೀನ ಪ್ರಮಾಣಪತ್ರ, ರಸ್ತೆ ಅಗೆವುದಾಕ್ಕಾಗಿ ಅನುಮತಿ, ಕೈಗಾರಿಕಾ/ಕೃಷಿ ಆಧಾರಿತ ಉತ್ಪಾದನಾ ಘಟಕ ಸ್ಥಾಪನೆಗೆ ಅನುಮತಿ, ನಿರಾಕ್ಷೇಪಣಾ ಪತ್ರ, ನರೇಗಾದಡಿ ಕಾರ್ಮಿಕರಿಗೆ ಜಾಬ್ ಕಾರ್ಡ್ ವಿತರಣೆ, ಕಾರ್ಮಿಕರಿಗೆ ಉದ್ಯೋಗ ಒದಗಿಸುವುದು, ಹೊಸ ಅಥವಾ ಅಸ್ತಿತ್ವದಲ್ಲಿರುವ ದೂರಸಂಪರ್ಕ ಮೂಲಸೌಕರ್ಯ ಗೋಪುರಕ್ಕೆ ಅನುಮತಿ/ ನಿಯಮಿತಗೊಳಿಸುವಿಕೆ, ಕೇಬಲ್ ಮೂಲಸೌಕರ್ಯ/ಭೂಗತ ಕೇಬಲ್ ಮೂಲಸೌಕರ್ಯಕ್ಕಾಗಿ ಅನುಮತಿ/ನಿಯಮಿತಗೊಳಿಸುವಿಕೆ, ನಮೂನೆ 9/11ಎ, ನಮೂನೆ 11ಬಿ ಸೇರಿದಂತೆ ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದಂತೆ ಕುಡಿಯುವ ನೀರು, ರಸ್ತೆ ಮತ್ತು ಸೇತುವೆಗಳ ದುರಸ್ತಿ, ನರೇಗಾ ಯೋಜನೆಗೆ ಮತ್ತು ಪಂಚಾಯತ್ ರಾಜ್ ವಿಷಯಗಳಿಗೆ ಸಂಬಂಧಿತ ಹಲವು 78 ಬಗೆಯ ಕುಂದುಕೊರತೆಗಳನ್ನು ದಾಖಲಿಸಿ, ನಿವಾರಣೆ ಪಡೆಯಬಹುದಾಗಿದೆ ಹಾಗೂ ಕುಂದುಕೊರತೆಯ ಸ್ಥಿತಿಗತಿಯನ್ನು ಕಾಲಕಾಲಕ್ಕೆ ಪರಿಶೀಲಿಸಬಹುದಾಗಿದೆ.

ಉಪವಿಭಾಗಾಧಿಕಾರಿ ಕಾರ್ತಿಕ್, ಜಂಟಿಕೃಷಿ ನಿರ್ದೇಶಕ ಮಂಜುನಾಥ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್ ಸೇರಿದಂತೆ ತಾಲ್ಲೂಕುಗಳ ತಹಸಿಲ್ದಾರರು, ತಾ.ಪಂ.ಕಾರ್ಯನಿರ್ವಾಹಕಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಶಾಸಕರ ಅಧ್ಯಕ್ಷತೆಯಲ್ಲಿ ನಡೆದ ಬಗರ್ ಹುಕ್ಕುಂ ಸಕ್ರಮೀಕರಣ ಸಮಿತಿ ಸಭೆ

# ಬಾಕಿ ಉಳಿದ ಸುಮಾರು 3485 ಅರ್ಜಿಗಳ ವಿಲೇವಾರಿಗೆ ಕ್ರಮ: ಶಾಸಕ ರಘುಮೂರ್ತಿ

» **ಚಳ್ಳಕೆರೆ**

ಪ್ರತಿಗ್ರಾಮದಲ್ಲಿ 100 ಜಾನುವಾರುಗಳಿಗೆ 30 ಎಕರೆ ಗೋಮಾಳವನ್ನು ಮೀಸಲಿಟ್ಟು ಉಳಿದ ಭೂಮಿಯನ್ನು ಸಾಗುವಳಿದಾರರಿಗೆ ಹಂಚಿಕೆ ಮಾಡಲು ಕಾನೂನಿನಡಿ ಅವಕಾಶವಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ಬಗರ್ ಹುಕ್ಕುಂ ಸಾಗುವಳಿ ಸಕ್ರಮೀಕರಣ ಸಮಿತಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ತಾಲ್ಲೂಕಿನಾದ್ಯಂತ ಇರುವ ಜಾನುವಾರುಗಳ ಪ್ರಸ್ತುತ ಪಟ್ಟಿ ಪಡೆದು ಸಾಗುವಳಿದಾರರಿಗೂ ಅನ್ಯಾಯವಾಗದಂತೆ ಎಚ್ಚರಿಕೆ ವಹಿಸಿ. ಕಾನೂನಿನಡಿ ಆರ್ಹ ಫಲಾನುಭವಿಗಳಿಗೆ ಸಾಗುವಳಿ ಭೂಮಿ ದೊರಕುವಂತೆ ಸೂಕ್ತ ಕ್ರಮವಹಿಸಬೇಕು.

1990ರಿಂದ2022ರೆಗೂ ಬಗರ್ ಹುಕ್ಕುಂ ಸಾಗುವಳಿ ಸಾವಿರಾರು ಅರ್ಜಿಗಳು ಬಂದಿವೆ. ಅದರಲ್ಲಿ ಕಾನೂನಿನಡಿ ಹಲವಾರು ಅರ್ಜಿಗಳು ವಿಲೆಯಾಗಿವೆ, ಮತ್ತೆ ಕೆಲವು ಕಡೆ ಭೂಮಿ ಸಮಸ್ಯೆ, ದಾಖಲೆಗಳಿಲ್ಲದ್ದು, ಕೆಲವರು ಸಾಗುವಳಿ ಮಾಡದಿದ್ದರೂ ಅರ್ಜಿ ಸಲ್ಲಿಸಿರುವುದು, ಭೂಮಿ ಹೊಂದಿರುವವರಿಗೆ ಕೈತಪ್ಪಿಲಿವೆ. ಯಾರಿಗೆ ಅಗತ್ಯವಾಗಿ ಭೂಮಿಯ ಅಗತ್ಯತೆ ಇದೆ, ಅಂತಹ ಆರ್ಹ ಫಲಾನುಭವಿಗಳಿಗೆ ದೊರಕಿಸುವ ನಿಟ್ಟಿನಲ್ಲಿ ಸರ್ಕಾರಮಟ್ಟದ ಹಿರಿಯ ಆಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮವಹಿಸುವ ಭರವಸೆ ನೀಡಿದರು.



ತಹಶೀಲ್ದಾರ್ ರೇಹಾನ್ ಪಾಷ ಮಾತನಾಡಿ, 1990ರಲ್ಲಿ ರೂಲ್ 50 ಕಸಬಾ ಮತ್ತು ಪರಶುರಾಮಪುರ ವ್ಯಾಪ್ತಿಯಲ್ಲಿ 11156 ಅರ್ಜಿಗಳು ಬಂದಿದ್ದು, 4994 ಸಕ್ರಮ, 7062 ಅರ್ಜಿಗಳನ್ನು ವಿಲೇಯಾಗಿವೆ. ರೂಲ್ 53ರಡಿ 1999-2000ರಲ್ಲಿ ಒಟ್ಟು17945 ಅರ್ಜಿಗಳಲ್ಲಿ 2668ಸಕ್ರಮಗೊಂಡು, 15233ಗಳು ವಿವಿಧ ಕಾರಣಗಳಿಂದ ರಿಜೇಟಾಗಿವೆ. 17901ಅರ್ಜಿಗಳು ವಿಲೆಗೊಂಡು 44 ಅರ್ಜಿಗಳು ಬಾಕಿ ಇವೆ. ರೂಲ್ 57ರಲ್ಲಿ 2018-22ರ ವರೆಗೆ 3485 ಅರ್ಜಿಗಳು ಬಂದಿದ್ದು ಅವುಗಳ ಪರಿಶೀಲನಾ ಕಾರ್ಯ ನಡೆಯುತ್ತುದೆ.ರೂಲ್ 57ರಲ್ಲಿ 3488ಅರ್ಜಿಗಳು ಬಂದಿದ್ದು, ಗೋಮಾಳವಿಲ್ಲದೆ ಸುಮಾರು 2688 ಅರ್ಜಿಗಳನ್ನು ವಿಲೇ ಮಾಡಲಾಗಿದೆ. ಅದರಲ್ಲೂ ಕೆಲವೊಂದು ಆರ್ಹ ಫಲಾನುಭವಿಗಳಿಗೆ ಗ್ರಾಮದಲ್ಲಿ ಸರ್ಕಾರಿ ಜಮೀನಿಗೆ ಅನುಗಿಣವಾಗಿ ಹಂಚಿಕೆ ಮಾಡಲು ಸರ್ಕಾರದ ಆದೇಶವಿದ್ದು, ಮುಂದಿನ ದಿನಗಳಲ್ಲಿ ಸಭೆ ನಡೆಸಿ ನಿರ್ದಾರ ಕೈಗೊಳ್ಳಲಾಗುವುದು ಎಂದರು.

### ಸಿಎಂ ಜಿಲ್ಲಾಧಿಕಾರಿಗಳೊಂದಿಗೆ ಸಂವಾದ

# ಪ್ರತಿ ಜಿಲ್ಲೆಗೆ ಬರಗಾಲಕ್ಕೆ ರೂ.2 ಕೋಟಿ ಬಿಡುಗಡೆ



» **ದಾವಣಗೆರೆ**

ಈ ಬಾರಿ ತೀವ್ರ ಬರಗಾಲ ಎದುರಾಗಿದೆ, ಮುಂಗಾರು ಹಾಗೂ ಹಿಂಗಾರು ಮಳೆ ಕೊರತೆಯಾಗಿ ಬರಗಾಲ ಉದ್ಭವಿಸಿದೆ. ಬರುವ ಜೂನ್ ಅಂತ್ಯದವರೆಗೆ ಬರ ನಿರ್ವಹಣೆಗೆ ಸೂಕ್ತ ಕ್ರಿಯಾಯೋಜನೆ ರೂಪಿಸಿ, ಸಮರ್ಪಕ ಕುಡಿಯುವ ನೀರು ಪೂರೈಕೆ ಮತ್ತು ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಕ್ರಮ ಕೈಗೊಂಡು ಜನರಿಗೆ ಉದ್ಯೋಗ ನೀಡುವ ಕೆಲಸ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಾರ್ಚ್ 5 ರಂದು ಬೆಂಗಳೂರಿನಿಂದ ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ನಡೆಸಿದ ವೀಡಿಯೋ ಸಂವಾದದಲ್ಲಿ ತಿಳಿಸಿದರು. ಬರಗಾಲದಿಂದ 48 ಲಕ್ಷ ಹೆಕ್ಟೇರ್ ಬೆಳೆಹಾನಿಯಾಗಿದೆ. ಮಳೆ ಕೊರತೆಯಿಂದ ಕುಡಿಯುವ ನೀರಿನ ಸಮಸ್ಯೆ ಮಾರ್ಚ್, ಏಪ್ರಿಲ್ ಹಾಗೂ ಮೇ ತಿಂಗಳುಗಳಲ್ಲಿ ಪರಿಸ್ಥಿತಿ ಗಂಭೀರವಾಗಲಿದೆ. ಪೂರ್ವ ಮುಂಗಾರು ಮಳೆಯನ್ನು ಕೆಲವೆಡೆ ನಿರೀಕ್ಷಿಸಲಾಗಿದೆ. ಆದಾಗ್ಯೂ ಪ್ರತಿಯೊಂದು ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಸಿಇಓ ಪರಿಸ್ಥಿತಿಯನ್ನು ಅವಲೋಕಿಸಿ ಸೂಕ್ತ ಯೋಜನೆ ರೂಪಿಸಬೇಕು. ಮಾಧ್ಯಮಗಳಲ್ಲಿ ಪ್ರಕಟವಾಗುವ ಜನರ ಸಮಸ್ಯೆಗಳ ಕುರಿತ ವರದಿಗಳನ್ನು ಪರಿಶೀಲಿಸಿ, ಅವುಗಳಿಗೆ ತಕ್ಷಣವೇ ಸ್ಪಂದಿಸಬೇಕು. ಕುಡಿಯುವ ನೀರಿನ ತೊಂದರೆಯಾಗಬಾರದು.

## ಪ್ರಮುಖ ಸುದ್ದಿ

### ದಾವಣಗೆರೆ ನಗರ ದೇವತೆ ದುರ್ಗಾಂಬಿಕಾ ದೇವಿಯ 3 ವರ್ಷಕ್ಕೊಮ್ಮೆ ಜಾತ್ರಾ ಮಹೋತ್ಸವ ಮಾರ್ಚ್ 17 ರಿಂದ 20 ರವರೆಗೆ

# ಜಾತ್ರೆ ನಡೆಸಲು ಎಲ್ಲರ ಸಹಕಾರ ಅಗತ್ಯ; ಡಾ; ಶಾಮನೂರು ಶಿವಶಂಕರಪ್ಪ

» **ದಾವಣಗೆರೆ**

ನಗರದೇವತೆ ದುರ್ಗಾಂಬಿಕಾ ದೇವಿಯ ಜಾತ್ರೆಯು ಮೂರು ವರ್ಷಗಳಿಗೊಮ್ಮೆ ನಡೆಯಲಿದ್ದು ಮಾರ್ಚ್ 17 ರಿಂದ 20 ರ ವರೆಗೆ ಅದ್ದೂರಿಯಾಗಿ ಜರುಗುವುದರಿಂದ ಭಕ್ತಾಧಿಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಬೇಕೆಂದು ದಾವಣಗೆರೆ ದಕ್ಷಿಣ ಶಾಸಕರು ಹಾಗೂ ದುರ್ಗಾಂಬಿಕಾ ದೇವಸ್ಥಾನ ಟ್ರಸ್ಟ್ ಅಧ್ಯಕ್ಷರಾದ ಡಾ; ಶಾಮನೂರು ಶಿವಶಂಕರಪ್ಪ ತಿಳಿಸಿದರು.

ಅವರು ಮಂಗಳವಾರ ದುರ್ಗಾಂಬಿಕಾ ದೇವಸ್ಥಾನದ ಆವರಣದಲ್ಲಿ ಜಾತ್ರಾ ಸಿದ್ದತೆ ಪ್ರಯುಕ್ತ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಜಾತ್ರಾ ಸಂದರ್ಭದಲ್ಲಿ ಲಕ್ಷಾಂತರ ಭಕ್ತಾಧಿಗಳು ಇಲ್ಲಿಗೆ ಆಗಮಿಸುವುದರಿಂದ ಜನರಿಗೆ ಸುಗಮ ಸಂಚಾರ, ನೀರಿನ ವ್ಯವಸ್ಥೆ, ವಿದ್ಯುತ್ ಪೂರೈಕೆ, ಪೊಲೀಸ್ ಬಂದೋಬಸ್ತ್, ಶೌಚಾಲಯದ ವ್ಯವಸ್ಥೆ ಸೇರಿದಂತೆ ಜನರ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ. ಜಿಲ್ಲಾ ಆಡಳಿತದಿಂದ ಜಾತ್ರೆಗೆ ಬೇಕಾದ ಎಲ್ಲಾ ನೆರವು ನೀಡಬೇಕು ಮತ್ತು ಮಹಾನಗರ ಪಾಲಿಕೆಯಿಂದ ಸ್ವಚ್ಚತೆ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕೆಂದರು.

ಜಾತ್ರೆಯನ್ನು ಸರ್ಕಾರ ಹೇಳಿದ ರೀತಿ ನಡೆಸಲಾಗುತ್ತದೆ, ಪ್ರಾಣಿಬಲಿ ನೀಡುವುದಿಲ್ಲ, ಮೌಢ್ಯಾಚರಣೆ ಮಾಡಲಾಗುವುದಿಲ್ಲ. ಎಲ್ಲಾ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡುವ ಮೂಲಕ ನಗರ ದೇವತೆ ಜಾತ್ರೆಯನ್ನು ಯಶಸ್ವಿಯಾಗಿ ನಡೆಸಬೇಕೆಂದು ತಿಳಿಸಿದರು.



ಸ್ವಚ್ಚತೆ ಮತ್ತು ನೆರಳು; ಲಕ್ಷಾಂತರ ಭಕ್ತಾಧಿಗಳು ಜಾತ್ರಾ ವೇಳೆ ಆಗಮಿಸುವುದರಿಂದ ಇಲ್ಲಿ ಅವರು ತಮ್ಮ ಹರಕೆಯ ವಸ್ತುಗಳನ್ನು ಬಿಡುವುದು, ಹೂ, ಬೇವಿನಸೊಪ್ಪು ತರುವುದರಿಂದ ಆಗಿಂದಾಗ್ಗೆ ತೆರವು ಮಾಡಬೇಕಾಗುತ್ತದೆ. ಇದಕ್ಕಾಗಿ ಪಾಲಿಕೆಯಿಂದ ಸಿಬ್ಬಂದಿಗಳನ್ನು ನಿಯೋಜಿಸಬೇಕು. ಮತ್ತು ನಿರಂತರ ನೀರು ಸರಬರಾಜು ಮಾಡಬೇಕು. ದೇವಸ್ಥಾನದ ಬಳಿ ಎರಡು ಶೌಚಾಲಯಗಳು ಇದ್ದು ಹೆಚ್ಚುವರಿಯಾಗಿ ಮೊಬೈಲ್ ಟಾಯ್ಲೆಟ್‌ಗಳನ್ನು ಪಾಲಿಕೆಯಿಂದ ಅಳವಡಿಸಬೇಕೆಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಪಾಲಿಕೆ ಆಯುಕ್ತರು ಮಾತನಾಡಿ ಪಾಲಿಕೆಯಿಂದ ಸ್ವಚ್ಚತೆಗೆ ಸಿಬ್ಬಂದಿಯನ್ನು ನಿಯೋಜಿಸಲಾಗುತ್ತದೆ. ಮತ್ತು ಈಗಾಗಲೇ ಇಲ್ಲಿನ ರಸ್ತೆ ಗುಂಡಿ ಮುಚ್ಚಲು, ಚರಂಡಿ ದುರಸ್ಥಿಗೆ ಹಾಗೂ ಈ ಭಾಗದಲ್ಲಿನ 40 ದೇವಸ್ಥಾನಗಳ ಸುಣ್ಣ ಬಣ್ಣಕ್ಕಾಗಿ ಪಾಲಿಕೆಯಿಂದ ರೂ. 2 ಕೋಟಿ ವೆಚ್ಚ ಮಾಡಲಾಗುತ್ತಿದೆ ಎಂದರು.

ನಿರಂತರ ವಿದ್ಯುತ್; ಜಾತ್ರೆಯಲ್ಲಿ ಹೆಚ್ಚು ಜನರು ಭಾಗವಹಿಸುವುದರಿಂದ ರಾತ್ರಿ ವೇಳೆ ನಿರಂತರ ವಿದ್ಯುತ್ ಪೂರೈಕೆ ಮಾಡಬೇಕು. ಜೊತೆಗೆ ಎಲ್ಲಿಯೂ ಶಾರ್ಟ್‌ಸರ್ಕ್ಯೂಟ್ ಆಗದ ರೀತಿ ನೋಡಿಕೊಂಡು ಇಲ್ಲಿಗೆ ಸಿಬ್ಬಂದಿಗಳನ್ನು ನೇಮಕ ಮಾಡಬೇಕೆಂದು ಬೆಸ್ಕಾಂ ಇಂಜಿನಿಯರ್‌ಗೆ ತಿಳಿಸಲಾಯಿತು.

ಆರೋಗ್ಯ ರಕ್ಷಣೆ; ಜಾತ್ರಾ ವೇಳೆ ಹೆಚ್ಚು ಜನರು ಭಾಗವಹಿಸುವುದರಿಂದ ಈಗ ಬಿಸಿಲು ಹೆಚ್ಚಿದೆ, ಜನಸಂದಣಿ ಜಾಸ್ತಿಯಾಗುವುದರಿಂದ ಕೆಲವು ಸಂದರ್ಭದಲ್ಲಿ ಸಾಂಕ್ರಾಮಿಕ ರೋಗ ಹರಡುವ ಸಾಧ್ಯತೆ ಇದ್ದು ಪಾಲಿಕೆಯಿಂದ ಚರಂಡಿಗಳಿಗೆ ರಾಸಾಯಿನಿಕ ಸಿಂಪರಣೆ ಮಾಡಬೇಕು. ಆರೋಗ್ಯ ಇಲಾಖೆಯಿಂದ ಮೊಬೈಲ್ ಚಿಕಿತ್ಸಾಲಯ ನಿಯೋಜಿಸಿ ತುರ್ತು ಸೇವೆಗಾಗಿ ಅಂಬುಲೆನ್ಸ್ ವ್ಯವಸ್ಥೆಯನ್ನು ಮಾಡಬೇಕೆಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ; ಜಾತ್ರಾ ವೇಳೆ ಭಕ್ತಾಧಿಗಳು ಮೂಢನಂಬಿಕೆಗಳನ್ನು ಆಚರಣೆ ಮಾಡುವ ಸಾಧ್ಯತೆ ಇದ್ದು ಸಿಬ್ಬಂದಿಗಳ ನೇಮಕ ಮಾಡುವ ಮೂಲಕ ತೀವ್ರ ನಿಗಾವಹಿಸಲು ತಿಳಿಸಲಾಯಿತು.

ಪೊಲೀಸ್ ಬಂದೋಬಸ್ತ್; ಜಾತ್ರಾ ವೇಳೆ ಜನಸಂದಣಿ ಹೆಚ್ಚಿರುವುದರಿಂದ ಜೇಬುಗಳ್ಳರು, ಸರಗಳ್ಳಲು ಹೆಚ್ಚಾಗುವ ಸಂದರ್ಭವಿರುತ್ತದೆ. ಎಲ್ಲಾ ಕಡೆ ಸಿಸಿ ಕ್ಯಾಮೆರಾ ಅಳವಡಿಕೆಯನ್ನು ದೇವಸ್ಥಾನ ಸಮಿತಿಯಿಂದ ಮಾಡಿಕೊಳ್ಳಬೇಕೆಂದು ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ತಿಳಿಸಿದರು.

18 ಕಡೆ ಚೆಕ್ ಪೋಸ್ಟ್‌ಗಳ ನಿರ್ಮಾಣ ಮಾಡಲಾಗುತ್ತದೆ, ರಸ್ತೆ ಬದಿಯಲ್ಲಿ ಅಂಗಡಿ ಮುಂಗಟ್ಟುಗಳಿಗೆ ಅವಕಾಶ ಮಾಡಿಕೊಡದೆ ಸುಗಮ ಸಂಚಾರಕ್ಕಾಗಿ ಅನುಕೂಲ ಮಾಡಿಕೊಡಬೇಕು. ಬ್ಯಾರಿಕೇಡಿಂಗ್ ವ್ಯವಸ್ಥೆ ಮಾಡಬೇಕಾಗುತ್ತದೆ. ಸಾಮಾಜಿಕ ಜಾಲತಾಣದಲ್ಲಿ ದ್ವೇಷ ಹುಟ್ಟಿಸುವ ಪೋಸ್ಟ್‌ಗಳನ್ನು ಹಾಕಬಾರದು. ಜಾತ್ರಾ ವೇಳೆ ಜಗಳಗಳು ನಡೆಯದಂತೆ ದೇವಸ್ಥಾನ ಸಮಿತಿಯಿಂದ ಸ್ವಯಂ ಸೇವಕರನ್ನು ನೇಮಿಸುವ ಮೂಲಕ ಆಗಮಿಸುವ ಭಕ್ತರೊಂದಿಗೆ ಸೌಜನ್ಯಯುತವಾಗಿ ನಡೆದುಕೊಳ್ಳುವಂತೆ ನೋಡಿಕೊಂಡು ಅನಾವಶ್ಯಕವಾಗಿ ಪೊಲೀಸ್ ಭಾಗಿಯಾಗದಂತೆ ನೋಡಿಕೊಳ್ಳಬೇಕೆಂದರು.

ಪ್ಲೆಕ್ಸ್, ಬಂಟಿಂಗ್ಸ್‌ಗೆ ಅನುಮತಿ ಬೇಕು; ಜಾತ್ರಾ ವೇಳೆ ಪ್ಲೆಕ್ಸ್, ಬಂಟಿಂಗ್ಸ್ ಹಾಕುವವರು ಪಾಲಿಕೆಯಿಂದ ಅನುಮತಿ ಪಡೆದುಕೊಂಡಿರಬೇಕು. ಅನುಮತಿ ಇಲ್ಲದೇ ಇರುವ ಪ್ಲೆಕ್ಸ್‌ಗಳಿಗೆ ಅವಕಾಶ ಇರುವುದಿಲ್ಲ. ಪ್ಲಾಸ್ಟಿಕ್ ಬಳಕೆಯನ್ನು ಮಿತಿಗೊಳಿಸಿ ಪರಿಸರ ಸ್ನೇಹಿ ಜಾತ್ರೆ ಆಚರಣೆಗೆ ಮುಂದಾಗಬೇಕು. ಚುನಾವಣೆ ನೀತಿ ಸಂಹಿತೆ ಜಾರಿಯಾಗುವ ನಿರೀಕ್ಷೆ ಇದ್ದು ಇದನ್ನು ಪಾಲನೆ ಮಾಡಬೇಕಾಗುತ್ತದೆ. ಜಾತ್ರಾ ಸಂದರ್ಭದಲ್ಲಿ ಎಲ್ಲ ವ್ಯವಸ್ಥೆಗಳ ನಿರ್ವಹಣೆಗಾಗಿ ಕಂಟ್ರೋಲ್ ರೂಂ ಸ್ಥಾಪನೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಟ್ರಸ್ಟ್ ಸದಸ್ಯರಾದ ಚನ್ನಬಸಪ್ಪನವರು ಎಲ್ಲರ ಸಹಕಾರದಿಂದ ಜಾತ್ರೆಯನ್ನು ಸುಗಮವಾಗಿ ನಡೆಸಿಕೊಂಡು ಹೋಗೋಣ ಎಂದರು. ಸಭೆಯಲ್ಲಿ ಪಾಲಿಕೆ ಮೇಯರ್ ವಿನಾಯಕ್ ಬಿ.ಹೆಚ್, ಟ್ರಸ್ಟ್ ಸದಸ್ಯ ವೀರಣ್ಣ, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ವಿಜಯಕುಮಾರ್ ಎಂ.ಸಂತೋಷ್, ಮಂಜುನಾಥ್, ಪಾಲಿಕೆ ಆಯುಕ್ತರಾದ ರೇಣುಕಾ, ಉಪವಿಭಾಗಾಧಿಕಾರಿ ದುರ್ಗಶ್ರೀ, ತಹಶೀಲ್ದಾರ್ ಡಾ; ಅಶ್ವಥ್ ಎಂ.ಬಿ ಹಾಗೂ ಇನ್ನಿತರೆ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T